ಸಂಪುಟ: 02/ ಸಂಚಿಕೆ: ೧೨೦/ಬುಧವಾರ ದಿನಾಂಕ : ೨೫-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ಬೆಳಗಾವಿ ■ಧಾರವಾಡ ■ಬಾಗಲಕೋಟ ■ ವಿಜಯಪುರ ■ಗದಗ ■ಕೊಪ್ಪಳ ■ಹಾವೇರಿ ■ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 120/ WENDESDAY Date : 25-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs.

ಅಮೇರಿಕ ನಿರ್ಬಂಧ ರಾಜ್ಯಕ್ಕೆ ಕನಿಷ್ಠ ರೂ. 15,000 ಕೋಟಿ ನಷ್ಟ : ಖರ್ಗೆ

ಕಲಬುರಗಿ: ನಗರದಲ್ಲಿ ಸುದ್ದಿಗೋಷ್ಠಿಯೊಂದನ್ನು ಉದ್ದೇಶಿಸಿ ಮಾತಾಡಿದ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅಮೆರಿಕ ತೆರಳಲು ಕೇಂದ್ರ ಸರ್ಕಾರ ತನಗೆ ಅನುಮತಿ ನಿರಾಕರಿಸಿದ ಕಾರಣ ಕರ್ನಾಟಕಕ್ಕೆ ಏನಿಲ್ಲವೆಂದರೂ ರೂ. 15 ಸಾವಿರ ಕೋಟಿ ನಷ್ಟವಾಗಿರಬಹುದು ಎಂದು ಹೇಳಿದರು.

ಹಿಂದೆ ರಾಜ್ಯದ ನಿಯೋಗವೊಂದು ಯುಎಸ್ ಗೆ ಹೋಗಿದ್ದಾಗ ರೂ. 21,745 ಕೋಟಿ ಹೂಡಿಕೆಯನ್ನು ತರಲಾಗಿತ್ತು, ನಿವೇಶನ ತೊಡಗಿಸಿದ ಕಂಪನಿಗಳಲ್ಲಿ ಹಲವಾರು ಪ್ರತಿಷ್ಠಿತ ಸಂಸ್ಥೆಗಳಿದ್ದವು ಮತ್ತು ಅದರಿಂದ 18-20 ಸಾವಿರ ಜನರಿಗೆ ಉದ್ಯೋಗ ಸಿಕ್ಕಿತ್ತು ಎಂದು ಸಚಿವ ಹೇಳಿದರು. ಈ ಬಾರಿ ಹೋಗದ ಕಾರಣ ಭಾರೀ ಪ್ರಮಾಣದ ನಷ್ಟದೊಂದಿಗೆ ಸುಮಾರು 4-5ಸಾವಿರ ಜನಕ್ಕೆ ಕೆಲಸ ಸಿಗುವ ಅವಕಾಶ ಕೈತಪ್ಪಿದೆ ಎಂದು ಖರ್ಗೆ ವಿಷಾದ ವ್ಯಕ್ತಪಡಿಸಿದರು. ವೀಸಾ ನಿರಾಕರಣೆ ಬಗ್ಗೆ ವಿದೇಶಾಂಗ ಖಾತೆ ಸಚಿವರಿಗೆ ಪತ್ರ ಬರೆದು ಮೂರು ದಿನವಾದರೂ ಉತ್ತರವಿಲ್ಲ, ಕನಿಷ್ಠ ಯಾಕೆ ಅನುಮತಿ ನಿರಾಕರಿಸಲಾಯಿತು ಅಂತನಾದರೂ ಹೇಳಲಿ, ಈ ಭೇಟಿಯಿಂದ ರಾಜ್ಯಕ್ಕಾಗಲೀ, ದೇಶಕ್ಕಾಗಲೀ ಪ್ರಯೋಜನ ಇಲ್ಲ ಅಂತ ಕೇಂದ್ರ ಹೇಳಿದರೆ ಅದನ್ನು ಅಂಗೀಕರಿಸುತ್ತೇವೆ ಎಂದು ಖರ್ಗೆ ಹೇಳಿದರು.

ಕಾಲ್ನಡಿಗೆಯಲ್ಲಿ ಗಸ್ತು ಕರ್ತವ್ಯ ನಿರ್ವಹಿಸುವಂತೆ ಪೊಲೀಸರಿಗೆ ಸೀಮಂತ್‌ಕುಮಾರ್‌ಸಿಂಗ್ ಸೂಚನೆ

ಬೆಂಗಳೂರು,ಜೂ.24- ನಗರದಾದ್ಯಂತ ಬೆಳಗ್ಗೆ ಮತ್ತು ಸಂಜೆ ವೇಳೆಯಲ್ಲಿ ಪೊಲೀಸರು ಕಾಲ್ನಡಿಗೆ ಮೂಲಕ ಗಸ್ತು ಕರ್ತವ್ಯ ನಿರ್ವಹಿಸಬೇಕೆಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಸೂಚಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು,ಬೀಟ್‌ಗಳಿಗೆ ಸಿಬ್ಬಂದಿಯನ್ನು ನೇಮಿಸಿದ್ದೇವೆ ಅಲ್ಲದೇ, ಹೋಯ್ಸಳ ಹಾಗೂ ಚೀತಾ ವಾಹನಗಳಲ್ಲಿ ಪೊಲೀಸರು ಕರ್ತವ್ಯ ನಿರ್ವಹಿಸುತ್ತಾರೆಂದು ಅವರು ವಿವರಿಸಿದರು.

ಸಾರ್ವಜನಿಕರ ನಂಬಿಕೆಯನ್ನು ಬಲಪಡಿಸಲು ಮತ್ತು ಪೊಲೀಸ್ ಉಪಸ್ಥಿತಿಯನ್ನು ಹೆಚ್ಚಿಸಲು ಬೀಟ್ ಸಿಬ್ಬಂದಿಯೊಂದಿಗೆ, ಹೋಯ್ಸಳ, ಚೀತಾ ವಾಹನದ ಸಿಬ್ಬಂದಿಗಳು ಮತ್ತು ಸಬ್‌ಇನ್‌ಸಪೆಕ್ಟರ್ ಶ್ರೇಣಿಯ ಅಧಿಕಾರಿಗಳು ತಮ್ಮ ತಮ್ಮ ಠಾಣೆ ವ್ಯಾಪ್ತಿಗಳಲ್ಲಿ ಕಾಲ್ನಡಿಗೆಯ ಮುಖಾಂತರ ಗಸ್ತು ಕರ್ತವ್ಯ ನಿರ್ವಹಿಸಲು ಈಗಾಗಲೇ ಸೂಚಿಸಿದ್ದೇನೆ ಎಂದು ಅವರು ಹೇಳಿದರು.

ಅಪರಾಧ ಹಾಗೂ ರೌಡಿ ಚಟುವಟಿಕೆಗಳನ್ನು ಹತ್ತಿಕ್ಕಲು ಈ ಹೊಸ ಯೋಜನೆಯನ್ನು ಪ್ರಾಯೋಗಿಕವಾಗಿ ಪೂರ್ವ ಮತ್ತು ಪಶ್ಚಿಮ ವಿಭಾಗಗಳಲ್ಲಿ ಜಾರಿಗೆ ತರಲಾಗಿದ್ದು, ಇದಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಬಂದಿದೆ ಎಂದು ಅವರು ತಿಳಿಸಿದರು.

ಚೀತಾ ಹಾಗೂ ಹೊಯ್ಸಳ ವಾಹನಗಳಲ್ಲಿ ಸಿಬ್ಬಂದಿ ಗಸ್ತು ಮಾಡುತ್ತಿರುತ್ತಾರೆ. ಆದರೆ ಅವರು ಸ್ಥಳದಲ್ಲಿ ಖುದ್ದು ಹಾಜರಿದ್ದು, ಸೂಕ್ಷ್ಮ ಪ್ರದೇಶಗಳು ಹಾಗೂ ಸರ್ಕಲ್‌ಗಳಲ್ಲಿ ವಾಹನಗಳನ್ನು ನಿಲ್ಲಿಸಿ ಗಸ್ತು ಮಾಡುವುದರಿಂದ ಅಪರಾಧಗಳನ್ನು ನಿಯಂತ್ರಿಸ ಬಹುದಾಗಿದೆ ಎಂದು ಅವರು ಹೇಳಿದರು.

ವಿಶೇಷವಾಗಿ ಸಂಜೆ ವೇಳೆಯಲ್ಲಿ ಮತ್ತು ವಾರದ ಕೊನೆಯ ದಿನಗಳಂದು ಸೂಕ್ಷ್ಮ ವಲಯಗಳಾದಂತಹ ಪ್ರಾರ್ಥನ ಸ್ಥಳಗಳು, ಮಾಲ್‌ಗಳು ಹಾಗೂ ಮಾರ್ಕೆಟ್‌ನಂತಹ ಹೆಚ್ಚು ಜನ ಸಂದಣಿ ಇರುವ ಸ್ಥಳಗಳಲ್ಲಿ ಕಾಲ್ನಡಿಗೆ?ಯ ಮುಖಾಂತರ ನಮ್ಮ ಸಿಬ್ಬಂದಿ ಗಸ್ತು ಮಾಡಿದರೆ, ಯಾವುದೇ ಘರ್ಷಣೆಗಳಾಗಲೀ, ಕಾನೂನು ಬಾಹಿರ ಚಟುವಟಿಕೆಗಳಾಗಲೀ ನಡೆಯುವುದಿಲ್ಲ. ಒಂದು ವೇಳೆ ಅಂತಹ ಘಟನೆಗಳೇನಾದರೂ ನಡೆದರೆ ತಕ್ಷಣ ತಡೆಗಟ್ಟಬಹುದಾಗಿದೆ ಎಂದು ಅವರು ವಿವರಿಸಿದರು.

ಈಗಿರುವ ನಮ್ಮ 112 ನಂಬರ್‌ಗೆ ಸಾರ್ವಜನಿಕರು ಕರೆ ಮಾಡಿದ ತಕ್ಷಣ ಅದನ್ನು ಸ್ವೀಕರಿಸಲಾಗುತ್ತದೆ. ಸಾರ್ವಜನಿಕರು ಕುಂದು ಕೊರತೆಗಳನ್ನು ತಿಳಿಸಿ, ಪೊಲೀಸರ ಸಹಾಯವನ್ನು ಪಡೆದುಕೊಳ್ಳಲು ನೆರವಾಗುತ್ತದೆ? ಎಂದರು. ಸಾರ್ವಜನಿಕ ಸ್ಥಳಗಳಲ್ಲಿ ಪೊಲೀಸ್ ಸಿಬ್ಬಂದಿ ಖುದ್ದು ಸ್ಥಳದಲ್ಲಿದ್ದರೆ ನಾಗರಿಕರು ಸಹಾಯವನ್ನು ಪಡೆದುಕೊಳ್ಳಲು ಸಹಕಾರಿಯಾಗಲಿದೆ ಎಂದರು.

ರಾಜ್ಯದ 7 ಮಸೂದೆಗಳಿಗೆ ರಾಷ್ಟ್ರಪತಿಗಳ ಅಂಗೀಕಾರ ಕೋರಿದ ಮುಖ್ಯಮಂತ್ರಿ

ನವದೆಹಲಿ: ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ರಾಜ್ಯ ಶಾಸಕಾಂಗವು ಅಂಗೀಕರಿಸಿದ ಏಳು ಪ್ರಮುಖ ಮಸೂದೆಗಳಿಗೆ ಅನುಮೋದನೆ ನೀಡುವಂತೆ ಕೋರಿದರು. ರಾಷ್ಟ್ರಪತಿಗಳ ಮುಂದೆ ಮಂಡಿಸಲಾದ ಪ್ರಮುಖ ಮಸೂದೆಗಳಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ಮಸೂದೆ, 2015 ಸೇರಿದ್ದು, ಇದು ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಆರ್‌ಟಿಇ ಚೌಕಟ್ಟನ್ನು ಮಾರ್ಪಡಿಸಲು ಪ್ರಯತ್ನಿಸುತ್ತದೆ. ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ಮಸೂದೆ, 2024 ತನ್ನ ಖನಿಜ ಸಂಪನ್ಮೂಲಗಳಿಂದ ರಾಜ್ಯದ ಆದಾಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ರೂಪಿಸಲಾಗಿರುವ 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಕೆಟಿಪಿಪಿ) ತಿದ್ದುಪಡಿ ಕಾಯ್ದೆ 2025 ಮಸೂದೆಗೆ ಅನುಮೋದನೆ ಕೇಳಲಾಗಿದೆ.

ಆಡಳಿತ ಪ್ರಕ್ರಿಯೆಗಳನ್ನು ಸುಗಮಗೊಳಿಸುವತ್ತ ಗಮನಹರಿಸುವ ನೋಂದಣಿ (ಕರ್ನಾಟಕ ತಿದ್ದುಪಡಿ) ಮಸೂದೆ, 2025 ಮತ್ತು ಅದರ ಪ್ರತಿರೂಪವಾದ ನೋಟರಿಗಳು (ಕರ್ನಾಟಕ ತಿದ್ದುಪಡಿ) ಮಸೂದೆ, 2025 ಸಹ ಸೇರಿವೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಮಸೂದೆಗೆ ಕೂಡ ರಾಷ್ಟ್ರಪತಿಗಳ ಅನುಮೋದನೆ ಬೇಕಿದೆ.

ನೀರಿನ ಸೆಳೆತ ಹೆಚ್ಚಳ: ಬೋಟ್ ಸಂಚಾರ ಬಂದ್ 81 ಸಾವಿರ ಕ್ಯುಸೆಕ್ ನೀರಿನ ಹರಿವಿನ ಪ್ರಮಾಣ

ರಬಕವಿ-ಬನಹಟ್ಟಿ,ಜೂ23: ಸಮೀಪದ ಕೃಷ್ಣಾ ನದಿ ತುಂಬಿ ಹರಿಯುತ್ತಿರುವುದರಿಂದ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ. ಜೊತೆಗೆ ಬಾನುವಾರ ಸಂಜೆಯಿಂದ ನೀರಿನ ಸೆಳೆತ ಹೆಚ್ಚಾಗಿರುವದರಿಂದ ರಬಕವಿ-ಅಥಣಿ ತಾಲೂಕಿನ ಮಹೇಷವಾಡಗಿ ಸೇರಿದಂತೆ ಅನೇಕ ಗ್ರಾಮಗಳ ಸಂಪರ್ಕ ಕಲ್ಪಿಸುವ ಬೋಟ್ ಸೇವೆ ಬಂದ್ ಮಾಡಲಾಗಿದೆ ಎಂದು ತಾಲೂಕು ಆಢಳಿತ ಪತ್ರಿಕೆಗೆ ತಿಳಿಸಿದೆ.

ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಮಳೆ ಸುರಿಯುತ್ತಿರುವುದರಿಂದ ನದಿಯ ಒಳಹರಿವು ಹೆಚ್ಚಾಗಿದ್ದು ಇನ್ನೊಂದು ವಾರಕಾಲ ಇದೇ ಪ್ರಮಾನ ಮುಂದುವರೆಯಲಿದೆ. ಅ ಥ ಣಿ ತಾಲೂಕಿನ ಗ್ರಾಮಗಳ ಸಂಪರ್ಕ ಹೊಂದಲು ಅಲ್ಲಿನ ಜನರಿಗೆ ತೊಂದರೆಯಾಗಬಾರದೆಂಬ ಹಿತದೃಷ್ಟಿಯಿಂದ ನೀರಿನ ಒತ್ತಡದ ಪ್ರಮಾಣ ಕಡಿಮೆಯಿರುವ ತಾಲೂಕಿನ ಆಸಂಗಿ, ಅಸ್ಕಿ ಸಮೀಪದಲ್ಲಿ ಬೋಟ್ ಸೇವೆ ಮುಂದುವರೆದಿದೆ.

ಮುಂದಿನ ದಿನಗಳಲ್ಲಿ ನದಿಯು ಅಪಾಯ ಮಟ್ಟ ಮೀರಿ ಹರಿಯುವ ಸಾಧ್ಯತೆ ಇದೆ. ಮುನ್ನೆಚ್ಚರಿಕೆ ಕ್ರಮವಾಗಿ ಸುರಕ್ಷತೆ ದೃಷ್ಟಿಯಿಂದ ತೀರ ಹತ್ತಿರದ ನದಿ ಪಾತ್ರದಲ್ಲಿ ವಾಸಿಸುವ ಜನರು ಜಾನುವಾರುಗಳ ಸಮೇತ ಸುರಕ್ಷಿತ ಸ್ಥಳಗಳಿಗೆ ಹೋಗುವುದು ಸೂಕ್ತವೆಂದು ಅಧಿಕಾರಿಗಳು ಸೂಚಿಸಿದ್ದಾರೆ.

ಎಲ್ಲ ಗೇಟ್‌ಗಳಿಂದ ನೀರು ಬಿಡುಗಡೆ: ಹಿಪ್ಪರಗಿ ಬ್ಯಾರೇಜ್‌ನಲ್ಲಿರುವ ಎಲ್ಲ 22 ಗೇಟ್‌ಗಳ ಮೂಲಕ ಬಂದಷ್ಟೇ ನೀರನ್ನು ಹೊರಕ್ಕೆ ಹಾಕಲಾಗುತ್ತಿದೆ. ಸೋಮವಾರ 81 ಸಾವಿರ ಕ್ಯುಸೆಕ್ ನೀರಿನ ಪ್ರಮಾಣದ ಒಳಹರಿವಿದ್ದು, ಅಷ್ಟೇ ಪ್ರಮಾಣದಲ್ಲಿ ನೀರನ್ನು ಹೊರಕ್ಕೆ ಹಾಕಲಾಗುತ್ತಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಅಧಿಕಾರಿಗಳು ಕ್ಷಣ ಕ್ಷಣದ ಮಾಹಿತಿ ಪಡೆಯುವ ಮೂಲಕ ನದಿ ಪಾತ್ರದ ಜನತೆ ಸುರಕ್ಷತೆ ಕ್ರಮಕ್ಕೆ ಮನವಿ ಮಾಡಿದ್ದಾರೆ.

ಕೇಂದ್ರ ವಿತ್ತ ಸಚಿವೆ - ಮುಖ್ಯಮಂತ್ರಿ ಭೇಟಿ :ಬೆಳವಣಿಗೆಗೆ ಪೂರಕವಾಗಿರುವ ವಿಧಾನ ಅನುಸರಿಸಲು 16ನೇ ಹಣಕಾಸು ಆಯೋಗಕ್ಕೆ ಸೂಚಿಸುವಂತೆ ಮುಖ್ಯಮಂತ್ರಿ ಮನವಿ

ನವದೆಹಲಿ/ಬೆಂಗಳೂರು: ಸಿಎಂ ಸಿದ್ದರಾಮಯ್ಯ ಮಂಗಳವಾರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ, ರಾಜ್ಯಗಳ ನಡುವೆ ತೆರಿಗೆ ಹಂಚಿಕೆಗೆ ಸಂಬಂಧಿಸಿದಂತೆ ಬೆಳವಣಿಗೆಗೆ ಪೂರಕವಾಗಿರುವ ವಿಧಾನವನ್ನು ಅನುಸರಿಸಲು 16ನೇ ಹಣಕಾಸು ಆಯೋಗಕ್ಕೆ ಪ್ರತಿಪಾದಿಸುವಂತೆ ವಿನಂತಿಸಿದರು.

15ನೇ ಹಣಕಾಸು ಆಯೋಗ ತನ್ನ ಶಿಫಾರಸಿನಲ್ಲಿ ಕರ್ನಾಟಕದ ತೆರಿಗೆ ಪಾಲನ್ನು ಶೇ.4.713 ರಿಂದ ಶೇ.3.647 ಕ್ಕೆ ಇಳಿಕೆ ಮಾಡಿದ್ದರಿಂದ ರಾಜ್ಯದ ತೆರಿಗೆ ಪಾಲು 14ನೇ ಹಣಕಾಸು ಆಯೋಗಕ್ಕೆ ಹೋಲಿಸಿದರೆ 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಶೇ.23ರಷ್ಟು ಕಡಿಮೆಯಾಗಿರುವುದರ ಬಗ್ಗೆ ಸಿಎಂ ಕೇಂದ್ರ ಹಣಕಾಸು ಸಚಿವರಿಗೆ ವಿವರಿಸಿದರು. ಜೊತೆಗೆ, 15ನೇ ಹಣಕಾಸು ಆಯೋಗ ರಾಜ್ಯಕ್ಕೆ ಶಿಫಾರಸು ಮಾಡಿದ್ದ ರೂ.11,495 ಕೋಟಿಗಳ ವಿಶೇಷ ಅನುದಾನ ಸಿಗದ ಕಾರಣ, ಒಟ್ಟಾರೆಯಾಗಿ 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಒಟ್ಟು ರೂ.80,000 ಕೋಟಿಗಳು ರಾಜ್ಯಕ್ಕೆ ನಷ್ಟವಾಗಿರುವುದನ್ನು ತಿಳಿಸಿದ್ದಾರೆ.

ಶೇ.20 ರಷ್ಟು ಅಂಕವನ್ನು ನೀಡಬೇಕೆಂದು ಮನವಿ: 15ನೇ ಹಣಕಾಸು ಆಯೋಗ ರಾಜ್ಯಗಳ ನಡುವೆ ತೆರಿಗೆ ಹಂಚಿಕೆಯ ಸೂತ್ರವನ್ನು ಲೆಕ್ಕಮಾಡಲು ಆದಾಯ-ದೂರ (ಐಟಿಥಿಂಟಜ-ಜಥುಚಿಟಥಿಜ) ಮಾನದಂಡದ ಮೇಲೆ ಅತಿಯಾಗಿ ಅವಲಂಬಿಸಿದ ಕಾರಣ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ಹೆಚ್ಚಿನ ನಷ್ಟವಾಯಿತು. 15 ನೇ ಹಣಕಾಸು ಆಯೋಗ ಆದಾಯ-ದೂರ ಮಾನದಂಡಕ್ಕೆ ಶೇ.45 ರಷ್ಟು ಅಂಕವನ್ನು ನೀಡಿತ್ತು. ರಾಜ್ಯಕ್ಕೆ ಇದರಿಂದ ಉಂಟಾದ ನಷ್ಟವನ್ನು ತಪ್ಪಿಸುವ ಸಲುವಾಗಿ ಆದಾಯ-ದೂರ ಮಾನದಂಡದ ಅಂಕವನ್ನು ಶೇ.20 ರಷ್ಟು ಕಡಿಮೆ ಮಾಡಿ, ದೇಶದ ಆರ್ಥಿಕ ಪ್ರಗತಿಗೆ (ಉಆಕ) ರಾಜ್ಯಗಳು ನೀಡುವ ಕೊಡುಗೆಯನ್ನು ಪರಿಗಣಿಸಬೇಕು ಹಾಗೂ ಇದಕ್ಕೆ ಶೇ.20 ರಷ್ಟು ಅಂಕವನ್ನು ನೀಡಬೇಕೆಂದು ಮನವಿ ಮಾಡಿದರು.

ತೆರಿಗೆ ಹಂಚಿಕೆಯ ಸೂತ್ರದ ಆಧಾರದ ಮೇಲೆ ಹಂಚಿಕೆಗೆ ಪ್ರಸ್ತಾಪ: ಹಣಕಾಸು ಆಯೋಗವು ಶಿಫಾರಸ್ಸು ಮಾಡುವ ರಾಜಸ್ವ ಕೊರತೆ ಅನುದಾನಗಳನ್ನು ನಿಲ್ಲಿಸಲು ನಾವು ವಿನಂತಿಸಿದ್ದೇವೆ. ಏಕೆಂದರೆ ಅವು ವಿತ್ತೀಯ ಹೊಣೆಗಾರಿಕೆ ಅಧಿನಿಯಮದ (ಈಖಖಒ) ಚೌಕಟ್ಟಿನಲ್ಲಿ ಪ್ರಸ್ತಾಪಿಸಲಾದ ಆರ್ಥಿಕ ಶಿಸ್ತಿನ ತತ್ವಗಳಿಗೆ ವಿರುದ್ಧವಾಗಿವೆ. 15ನೇ ಹಣಕಾಸು ಆಯೋಗವು, ಒಟ್ಟು ಕೇಂದ್ರ ಸ್ವೀಕೃತಿಗಳ ಶೇ.1.92 ರಷ್ಟನ್ನು ರಾಜಸ್ವ ಕೊರತೆ ಅನುದಾನಗಳೆಂದು ಶಿಫಾರಸು ಮಾಡಿತ್ತು. ಆದ್ದರಿಂದ ಕೇಂದ್ರ ಸರ್ಕಾರದ ಒಟ್ಟು ಸ್ವೀಕೃತಿಗಳ ಶೇ.1.92 ರಷ್ಟು ಮೊತ್ತವನ್ನು ತೆರಿಗೆ ಹಂಚಿಕೆಯ ಸೂತ್ರದ ಆಧಾರದ ಮೇಲೆ ಎಲ್ಲಾ ರಾಜ್ಯಗಳಿಗೂ ಹಂಚಿಕೆ ಮಾಡಬೇಕೆಂದು ನಾವು ಪ್ರಸ್ತಾಪಿಸಿದ್ದೇವೆ ಎಂದು ಸಿಎಂ ತಿಳಿಸಿದ್ದಾರೆ. ಈ ಪ್ರದೇಶಗಳ ಅಭಿವೃದ್ಧಿ ಸವಾಲುಗಳನ್ನ ವಿವರಿಸಿ ಸಿದ್ದರಾಮಯ್ಯ: ಬೆಂಗಳೂರು, ಕಲ್ಯಾಣ ಕರ್ನಾಟಕ ಮತ್ತು ಮಲೆನಾಡು ಪ್ರದೇಶದ ಅಭಿವೃದ್ಧಿ ಸವಾಲುಗಳನ್ನು ಸಹ ಹಣಕಾಸು ಸಚಿವರ ಮುಂದೆ ಪ್ರಸ್ತಾಪಿಸಿದರು. ರಾಜ್ಯಗಳ ಬೆಳವಣಿಗೆಯನ್ನು ಉತ್ತೇಜಿಸಲು ನ್ಯಾಯಯುತ ಮತ್ತು ಬೆಳವಣಿಗೆಗೆ ಪೂರಕವಾಗುವ ತೆರಿಗೆ ಹಂಚಿಕೆಯ ಅವಶ್ಯಕತೆಯನ್ನು ಮನವರಿಕೆ ಮಾಡಿದ್ದಾರೆ. ಕರ್ನಾಟಕದ ಪ್ರಸ್ತಾವನೆಗಳು ವಿಶೇಷ ಪ್ರಕರಣವೆಂದು ಪರಿಗಣಿಸದೆ, ಇದು ಒಟ್ಟಾರೆ ರಾಷ್ಟ್ರೀಯ ಸಂಪನ್ಮೂಲ ಕ್ರೋಢೀಕರಣಕ್ಕಾಗಿ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಪ್ರಸ್ತಾವನೆಗಳಾಗಿವೆ ಎಂದು ಹೇಳಿದ್ದಾರೆ.

16ನೇ ಹಣಕಾಸು ಆಯೋಗಕ್ಕೆ ಕೇಂದ್ರ ಸರ್ಕಾರ ಸಲ್ಲಿಸುವ ಜ್ಞಾಪಕ ಪತ್ರದಲ್ಲಿ ರಾಜ್ಯ ಸರ್ಕಾರದ ಈ ಪ್ರಸ್ತಾವನೆಗಳನ್ನು ಸೇರಿಸುವಂತೆ ಹಣಕಾಸು ಸಚಿವರಿಗೆ ಮನವಿ ಮಾಡುವ ಮೂಲಕ, ಎಲ್ಲಾ ರಾಜ್ಯಗಳು ದೇಶದ ಅಭಿವೃದ್ಧಿಗೆ ಹೆಚ್ಚು ಪರಿಣಾಮಕಾರಿಯಾಗಿ ಕೊಡುಗೆ ನೀಡಲು ಬೆಳವಣಿಗೆ ಆಧಾರಿತ ತೆರಿಗೆ ಹಂಚಿಕೆ ಅವಶ್ಯಕ ಎಂದು ಒತ್ತಿ ಹೇಳಿದ್ದಾರೆ.

ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದುಕೊಂಡವರು

ವಿತರಿಸಿದವರ ವಿರುದ್ಧ ಕೈಗೊಂಡ ಕ್ರಮದ ಕುರಿತು ವರದಿ ಸಲ್ಲಿಸಿ

ಸರ್ಕಾರಕ್ಕೆ ಹೈಕೋರ್ಟ್ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ನಕಲಿ ಅಥವಾ ಸುಳ್ಳು ಜಾತಿ ಪ್ರಮಾಣಪತ್ರಗಳನ್ನು ಪಡೆದುಕೊಂಡವರ ಹಾಗೂ ಅವುಗಳನ್ನು ವಿತರಿಸಿದವರ ವಿರುದ್ಧ ಕೈಗೊಂಡಿರುವ ಕ್ರಮಗಳ ಬಗ್ಗೆ ನಾಲ್ಕು ವಾರಗಳಲ್ಲಿ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ರಾಜ್ಯ ಎಸ್ಸಿ-ಎಸ್ಟಿ ನಕಲಿ ಜಾತಿ ಪ್ರಮಾಣಪತ್ರಗಳ ತಡೆ ಸಮಿತಿ ಪ್ರಧಾನ ಕಾರ್ಯದರ್ಶಿ ಮಾರಪ್ಪ ನಾಯಕ್ ಹಾಗೂ ಇತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ. ಕಾಮೇಶ್ವರ್ ರಾವ್ ಹಾಗೂ ನ್ಯಾಯಮೂರ್ತಿ ಸಿ.ಎಂ. ಜೋಶಿ ಅವರಿದ್ದ ವಿಭಾಗೀಯ ಪೀಠ ಈ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನಕಲಿ ಅಥವಾ ಸುಳ್ಳು ಜಾತಿ ಪ್ರಮಾಣಪತ್ರ ಪಡೆದುಕೊಂಡವರ ಹಾಗೂ ಅದಕ್ಕೆ ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ವರದಿ ನೀಡುವಂತೆ ಈ ಹಿಂದೆ ಹೈಕೋರ್ಟ್ ಆದೇಶಿಸಿತ್ತು. ಅದರಂತೆ ಸಮಾಜ ಕಲ್ಯಾಣ ಇಲಾಖೆ ಆಯುಕ್ತರು ಹಾಗೂ ಪರಿಶಿಷ್ಟ ಪಂಗಡ ಕಲ್ಯಾಣ ನಿರ್ದೇಶಕರು ನ್ಯಾಯಾಲಯಕ್ಕೆ ವಸ್ತುಸ್ಥಿತಿ ವರದಿ ಸಲ್ಲಿಸಬೇಕಿತ್ತು. ಆದರೆ, ಈವರೆಗೆ ವರದಿ ಸಲ್ಲಿಸಿಲ್ಲ ಎಂದು ಪೀಠಕ್ಕೆ ವಿವರಿಸಿದರು.

ವಿಚಾರಣೆ ಸೆಪ್ಟೆಂಬರ್ 9ಕ್ಕೆ ಮುಂದೂಡಿಕೆ: ಇದಕ್ಕೆ ಸರ್ಕಾರದ ಪರ ವಕೀಲರು, ಈ ವಿಚಾರಕ್ಕೆ ಸಂಬಂಧಿಸಿದಂತೆ ವಿಶೇಷ ವಕೀಲರನ್ನು ಈಗಷ್ಟೇ ನೇಮಕ ಮಾಡಲಾಗಿದೆ. ನ್ಯಾಯಾಲಯದ ಆದೇಶದಂತೆ ವರದಿ ಸಲ್ಲಿಸಲು ಕಾಲಾವಕಾಶಬೇಕು ಎಂದು ಕೋರಿದರು. ಇದನ್ನು ಪರಿಗಣಿಸಿದ ನ್ಯಾಯಪೀಠ ನಾಲ್ಕು ವಾರಗಳಲ್ಲಿ ವರದಿ ಸಲ್ಲ

ಮಕ್ಕಳ ಉಜ್ವಲ ಭವಿಷ್ಯಕ್ಕೆ ಆರ್ಥಿಕ ಸಾಕ್ಷರತೆ ಅರಿವು ಅಗತ್ಯ-ಡಂಗಿ

ಇಂಡಿ: ಇಂದಿನ ಜಗತ್ತಿನಲ್ಲಿ ವ್ಯವಹಾರ ಚತುರತೆ ಎಲ್ಲರಿಗೂ ಅತ್ಯಗತ್ಯ. ಆರ್ಥಿಕ ಸಾಕ್ಷರತೆಯು ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸಿ, ಅವರ ಆರ್ಥಿಕ ಜ್ಞಾನವನ್ನು ಹೆಚ್ಚಿಸುತ್ತದೆ ಎಂದು ವಿಜಯಪುರದ ಆರ್ಥಿಕ ಸಾಕ್ಷರತೆ ಸಲಹೆಗಾರ ಈರೇಶ ಡಂಗಿ ಹೇಳಿದರು.

ಅವರು ಸೋಮವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ 'ಆರ್ಥಿಕ ಸಾಕ್ಷರತೆ-ಅರಿವು ಕಾರ್ಯಕ್ರಮ' ವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಹಣದ ವಹಿವಾಟಿನ ಅರಿವು ಇದ್ದಾಗ, ಉಳಿತಾಯದ ಮಹತ್ವ ತಿಳಿಯುವರು. ತಾವು ಸಂಗ್ರಹಿಸಿದ ಹಣವನ್ನು ಉತ್ತಮವಾಗಿ ನಿರ್ವಹಿಸುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳುವರು ಎಂದು ಹೇಳಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಶಿಕ್ಷಣ ಕಲಿಕೆಗೆ ಮನೆಯೇ ಮೊದಲ ಪಾಠ ಶಾಲೆ ಹೇಗೋ ಹಾಗೆಯೇ, 'ಆರ್ಥಿಕ ಸಾಕ್ಷರತೆ' ಕಲಿಸುವುದಕ್ಕೂ ಮನೆಯೇ ಮೊದಲ ಪಾಠ ಶಾಲೆಯಾಗಬೇಕು. ಆದ್ಯತೆಗೆ ಅನುಗುಣವಾಗಿ ಹಣ ಬಳಕೆ ಮತ್ತು ಉಳಿತಾಯ ಮನೋಭಾವನೆ ಬೆಳೆಸಲು ಈ ಅರಿವು ಅಗತ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಇಂಡಿ ಆರ್ಥಿಕ ಸಾಕ್ಷರತೆ ಸಲಹೆಗಾರ ಭರತೇಶ ಉಪಾಧ್ಯ ಮಾತನಾಡಿ, ಮಕ್ಕಳಿಗೆ ದೈನಂದಿನ ಹಣಕಾಸಿನ ವಹಿವಾಟಿನ ಪರಿಚಯ ಮಾಡಿಸುವುದು ಇಂದಿನ ಅಗತ್ಯಗಳಲ್ಲಿ ಒಂದಾಗಿದೆ. ಇದರಿಂದ ಮಕ್ಕಳಲ್ಲಿ ಕುಟುಂಬದ ಖರ್ಚು-ವೆಚ್ಚಗಳ ಮಾಹಿತಿ ತಿಳಿದು, ವಹಿವಾಟು ಕೌಶಲ್ಯ ಬೆಳೆಯುತ್ತದೆ ಎಂದು ಹೇಳಿದರು.

ಶಿಕ್ಷಕರಾದ ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ, ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು.

IT 2.0" ತಂತ್ರಜ್ಞಾನ ಗ್ರಾಹಕ ;ಅಂಚೆ ನೌಕರರ ಸ್ನೇಹಿ ಅಂಚೆ ಅಧೀಕ್ಷಕ ರಮೇಶ ಮಡಿವಾಳರ

ಗದಗ: ಅಂಚೆ ಇಲಾಖೆಯಲ್ಲಿ "IT 2.0" ತಂತ್ರಜ್ಞಾನ ಆರಂಭದಿಂದಾಗಿ ತ್ವರಿತ ಮತ್ತು ಉತ್ತಮ ಸೇವೆ ದೊರೆಯಲಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಭಾರತೀಯ ಅಂಚೆ ಇಲಾಖೆಯ ಪ್ರಧಾನ ಅಂಚೆ ಕಚೇರಿಯಲ್ಲಿ ಸೋಮವಾರ "IT 2.0" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಚೆ ಇಲಾಖೆಯ ಕಾರ್ಯಚಟುವಟಿಕೆಗಳಿಗೆ ಅಗತ್ಯವಾದ ತಂತ್ರಾಂಶಗಳನ್ನು ನೂರಿತ ಅಂಚೆ ತಂತ್ರಜ್ಞಾನರಿಂದ ತಯಾರಿಸಿದೆ. ಇದರಿಂದಾಗಿ ಅನುಭವ ಆಧಾರದಲ್ಲಿ ಹೆಚ್ಚು ಸರಳೀಕರಣಗೊಳಿಸಿದ ತಂತ್ರಜ್ಞಾನ ಅಂಚೆ ಇಲಾಖೆಗೆ ಲಭಿಸಿದೆ ಎಂದರು.

ದೇಶದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಪ್ರಾಯೋಗಿಕವಾಗಿ "IT 2.0" ಜಾರಿಗೆ ತಂದಿದೆ. ಈಗಾಗಲೇ ಅಂಚೆ ಇಲಾಖೆ ಹಲವು ದಶಕಗಳಿಂದ ಜನರ ಮನೆ ಬಾಗಿಲಿಗೆ ವಿಶ್ವಾಸಾರ್ಹ ಸೇವೆ ನೀಡುತ್ತಿದೆ. ಈ ಸಾಲಿಗೆ ಈಗ ಹೊಸ ನವೀಕರಣದೊಂದಿಗೆ ಗ್ರಾಹಕ ಮತ್ತು ಅಂಚೆ ನೌಕರರ ಸ್ನೇಹಿಯಾಗಿ ರೂಪಾಂತರಗೊಳಲಿದೆ ಎಂದರು.

ಗದಗ ಉಪ ವಿಭಾಗ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ ಹಾಗೂ ಉಪ ಅಂಚೆ ಪಾಲಕ ದೊಡ್ಡಪ್ಪ ಇಟಗಿ ಪ್ರಾಸ್ತಾವಿಕವಾಗಿ ಮಾತನಾಡಿ,ಅಂಚೆ ಇಲಾಖೆ ಕಾರ್ಯನಿರ್ವಹಣೆಯಲ್ಲಿ ಸುಧಾರಣೆ, ಬೆಳವಣಿಗೆ ಮತ್ತು ವಿವಿಧ ವಲಯಗಳಲ್ಲಿ ಉತ್ಕೃಷ್ಟ ಸೇವಾ ಸಾಧನೆ ಬಗೆಗೆ ತಿಳಿಸಿದರು.

ವಿಭಾಗೀಯ ಸಹಾಯಕಅಂಚೆ ಅಧೀಕ್ಷಕ ವಿ.ಸುನೀಲಕುಮಾರ, ಡಿ.ಜಿ.ಮ್ಯಾಗೇರಿ, ಶರಣಪ್ಪ ನಾಯ್ಕರ, ವೆಂಕಟೇಶ ಆಕಳವಾಡಿ, ವೀರಣ್ಣ ಅಂಗಡಿ, ಎಸ್.ವಿ.ಹಿರೇಮಠ, ಸಿದ್ಧಲಿಂಗೇಶ ಯಂಡಿಗೇರಿ, ವೈ. ಎಸ್.ಗುಗ್ಗರಿ, ಮನೋಹರ ಕಡಿಯವರ, ಉಮೇಶ ಸಂದಿಮನಿ, ಮಹಾಂತೇಶ ಗದಗ, ರವಿ ಜಾದವ, ವಾಣಿ ಮಾಂಡ್ರೆ, ಸರೋಜ ಪಟ್ಟಣಶೆಟ್ಟಿ, ನೀಲಮ್ಮ ದಿಬ್ಬದಮನಿ, ವಿದ್ಯಾ ಗದಗ , ಶಿವರಾಜ ಕ್ಷತ್ರಿಯವರ, ಮತ್ತಿತರು ಪಾಲ್ಗೊಂಡಿದ್ದರು.ಪ್ರಧಾನ ಅಂಚೆ ಪಾಲಕ ಮಂಜುಳಾ ದೇಗಿನಾಳ ಅಧ್ಯಕ್ಷತೆ ವಹಿಸಿದ್ದರು.

ಜನಮನ ಸೆಳೆದ ವಿವಿಧ ಚಿತ್ರಾವಳಿ..

ನವ ವಧುವಿನಂತೆ ಕಂಗೊಳಿಸಿದ ಪ್ರಧಾನ ಅಂಚೆ ಇಲಾಖೆ ಎಲ್ಲಾ ಕೌಂಟರಗಳಿಗೂ ವಿವಿಧ ಹೂ ಹಾಗೂ ಚಿತ್ರಾವಳಿಗಳಲ್ಲಿ ಅಂಚೆ ಇಲಾಖೆ ವಿವಿಧ ಸೇವೆ ಬಗೆಗೆ ರಂಗೋಲಿಗಳಿಂದ ಅಲಂಕಾರಿಸಲಾಗಿತ್ತು. ಇದರಿಂದಾಗಿ ಗ್ರಾಹಕರ ಮೆಚ್ಚುಗೆ ಪಡೆಯಿತು.

ದುಶ್ಚಟಮುಕ್ತ ಸಮಾಜ ನಿರ್ಮಿಸುವಲ್ಲಿ ಮಕ್ಕಳ ಪಾತ್ರ ಬಹಳ ಮುಖ್ಯ- ಸತೀಶ್ ನಾಯ್ಕ

ಬೆಳಗಾವಿ : ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ) ಖಾಸಬಾಗ ಬೆಳಗಾವಿ. ಜಿಲ್ಲಾ ಜನಜಾಗೃತಿ ವೇದಿಕೆ ಬೆಳಗಾವಿ ಮತ್ತು ಮಹೇಶ್ ಫೌಂಡೇಶನ್ ಕಣಬರ್ಗಿ ಇವರ ಸಂಯುಕ್ತ ಆಶ್ರಯದಲ್ಲಿ ಉತ್ಕರ್ಷ ಪ್ರೌಢಶಾಲಾ ಮಕ್ಕಳಿಗೆ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸತೀಶ್ ನಾಯ್ಕ್ ಜಿಲ್ಲಾ ನಿರ್ದೇಶಕರು ಶ್ರೀ.ಕ್ಷೇ.ಧ.ಗ್ರಾ ಯೋಜನೆ ಬಿ.ಸಿ ಟ್ರಸ್ಟ್ ಬೆಳಗಾವಿ ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಗ್ರಾಮಾಭಿವೃದ್ಧಿ ಯೋಜನೆಯ ಹಲವು ಕಾರ್ಯಕ್ರಮಗಳಲ್ಲಿ ಸ್ವಾಸ್ಥ್ಯ ಸಮಾಜ ನಿರ್ಮಿಸುವ ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಪ್ರೀತಿಯ ಕಾರ್ಯಕ್ರಮವೇ ಜನಜಾಗೃತಿ ಇದರ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ. ಈ ಕಾರ್ಯಕ್ರಮದಿಂದ ಕರ್ನಾಟಕದಾದ್ಯಂತ ಪ್ರೌಢಶಾಲಾ ಮಕ್ಕಳಿಗೆ ದುಶ್ಚಟದಿಂದ ಆಗುವ ದಾರಿದ್ರತೆಗಳ ಬಗ್ಗೆ ಮಾಹಿತಿಯನ್ನು ನೀಡುವ ಉದ್ದೇಶವಾಗಿರುತ್ತದೆ ಎಂದರು. ಮತ್ತು ಸಮಾಜದಲ್ಲಿನ ಆದರ್ಶ ವ್ಯಕ್ತಿಗಳ ವ್ಯಕ್ತಿತ್ವವನ್ನು ಮೈಗೂಡಿಸಿಕೊಂಡಲ್ಲಿ ದುಶ್ಚಟ ಮುಕ್ತ ಸಮಾಜ ನಿರ್ಮಿಸುವಲ್ಲಿ ಮಕ್ಕಳ ಪಾತ್ರ ಮುಖ್ಯವಾಗಿರುತ್ತದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿದ್ದ ಬಸವರಾಜ್ ಸೊಪ್ಪಿಮಠ ಅಧ್ಯಕ್ಷರು ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಬೆಳಗಾವಿ ಇವರು ಇಂದಿನ ಯುವ ಪೀಳಿಗೆ ದುರ್ಜನರ ಸಹವಾಸದಿಂದ ದುಶ್ಚಟಗಳನ್ನು ಮೈಗೂಡಿಸಿಕೊಳ್ಳುತ್ತಿದ್ದು ಮುಂದೆ ಸಮಾಜದಲ್ಲಿ ಬಾಳಿ ಬದುಕಬೇಕಾಗಿದ್ದ ಯುವಜನತೆ ಸಂಕಷ್ಟ ಎದುರಿಸುತ್ತಿದೆ. ಮಕ್ಕಳು ಉತ್ತಮವಾದ ಸಂಸ್ಕಾರ ಶಿಸ್ತನ್ನು ಮೈಗೂಡಿಸಿಕೊಳ್ಳಬೇಕಾಗಿದ್ದು ಅವಶ್ಯಕ ಎಂದು ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ನೀಡಿದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹೇಶ್ ಜಾದವ್ ಸಂಸ್ಥಾಪಕರು ಮಹೇಶ್ ಫೌಂಡೇಶನ್ ಕಣಬರ್ಗಿ ಇವರು ವಹಿಸಿದ್ದರು. ಭಾವಕಣ್ಣ ಭರಮ ಬಂಗ್ಯಾಗೋಳ ವಾಲ್ಮೀಕಿ ಪ್ರಶಸ್ತಿ ವಿಜೇತರು ಬೆಳಗಾವಿ, ಸುಭಾಷ್ ಪಿ.ಸಿ ಯೋಜನಾಧಿಕಾರಿಗಳು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಖಾಸಬಾಗ್ ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಶುಭ ಹಾರೈಸಿದರು.

ಅಧ್ಯಾಪಕರಾದ ಮಾಲಾಶ್ರೀ ಅವರು ಸ್ವಾಗತಿಸಿ, ವಲಯ ಮೇಲ್ವಿಚಾರಕರಾದ ಭರತ್ ಉಳ್ಳೂರು ಕಾರ್ಯಕ್ರಮವನ್ನು ನಿರೂಪಿಸಿ ಧನ್ಯವಾದ ಮಾಡಿದರು.

ಬೆಳಗಾವಿ ಲಿಂಗಾಯತ ಮಹಿಳಾ ಸಮಾಜ ವಾರ್ಷಿಕೋತ್ಸವ – ಪದಗ್ರಹಣ ಸಮಾರಂಭ

ಲಿಂಗಾಯತ ಮಹಿಳಾ ಸಮಾಜದ ಶ್ರೇಯೋಭಿವೃದ್ಧಿಗಾಗಿ ನಿರಂತರ ಶ್ರಮ:ಅಧ್ಯಕ್ಷೆ ಮಧುಮತಿ ಹಿರೇಮಠ

ಬೆಳಗಾವಿ: ಇಲ್ಲಿನ ಕನ್ನಡ ಭವನದಲ್ಲಿ ಭಾನುವಾರ ಲಿಂಗಾಯತ ಮಹಿಳಾ ಸಮಾಜದ ವತಿಯಿಂದ ವಾರ್ಷಿಕೋತ್ಸವದ ನಿಮಿತ್ತ ನಹಲವು ಕಾರ್ಯಕ್ರಮ ಹಾಗೂ ನೂತನ ಸಮಿತಿಯ ಪದಗ್ರಹಣ ಸಮಾರಂಭ ಜರುಗಿದವು.

ಲಿಂಗಾಯತ ಮಹಿಳಾ ಸಮಾಜದ ನೂತನ ಅಧ್ಯಕ್ಷರಾಗಿ ಮಧುಮತಿ ಹಿರೇಮಠ, ಕಾರ್ಯದರ್ಶಿಯಾಗಿ ರಕ್ಷಾ ನೇಗಿನಾಳ ಹಾಗೂ 18 ಜನ ಸಮಿತಿ ಸದಸ್ಯರು ಪದಗ್ರಹಣ ಮಾಡಲಾಯಿತು. ಬಳಿಕ, ನೂತನವಾಗಿ ಆಯ್ಕೆಯಾದ ಅಧ್ಯಕ್ಷರನ್ನು ಹಾಗೂ ಸದಸ್ಯರು ಸನ್ಮಾನಿಸಿ ಅಭಿನಂದಿಸಲಾಯಿತು.

ನೂತನ ಅಧ್ಯಕ್ಷೆ ಮಧುಮತಿ ಹಿರೇಮಠ ಮಾತನಾಡಿ, ನಿಮ್ಮೆಲ್ಲರ ಆಶೀರ್ವಾದದಿಂದ ಅಧ್ಯಕ್ಷೆಯಾಗಿ ಆಯ್ಕೆ ಆಗಿರುವೆ. ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಎಲ್ಲಾ ಹಿರಿಯರ ಮಾರ್ಗದರ್ಶನದಲ್ಲಿ

ಮಹಿಳಾ ಸಮಾಜದ ಶ್ರೇಯೋಭಿವೃದ್ಧಿಗಾಗಿ ನಿರಂತರ ಕೆಲಸ ಮಾಡಲಾಗುವುದು. ವರ್ಷವೀಡಿ ಸಮಾಜ ಏಳಿಗೆಗಾಗಿ ನಿಮ್ಮೆಲ್ಲರ ಲ್ಲರ ಸಹಕಾರದಿಂದ ಸಮಾಜೋಪಯೋಗಿ ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ನನ್ನ ಆಯ್ಕೆಗೆ ಕೈಜೋಡಿಸಿದ ಆತ್ಮೀಯ ಸದಸ್ಯರಿಗೆ ಅಭಿನಂದನೆಗಳು ಎಂದು ಹೇಳಿದರು.

ಸಂಸ್ಥಾಪಕ ಗೌರವ ಅಧ್ಯಕ್ಷೆ ಶೈಲಗಾ ಭಿಂಗೆ ಮಾತನಾಡಿ, ಲಿಂಗಾಯತ ಮಹಿಳಾ ಸಮಾಜ 31 ವರ್ಷಗಳಿಂದ ಸಾಗಿ ಬಂದಿದೆ. ಸಮಾಜಕ್ಕೆ ಉಪಯುಕ್ತವಾಗುವ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿದೆ. ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ತೊಡಗಿಕೊಂಡು ನಾಡು-ನುಡಿಯ ಅಭಿವೃದ್ಧಿಗೆ ಮಹಿಳಾ ಸಬಲೀಕರಣಕ್ಕಾಗಿ ಶ್ರಮಿಸಬೇಕೆಂದು ಹೇಳಿದರು.

ಅಂತರರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ಯ ಪ್ರತಿಭಾ ಗುತ್ತಿಗೋಳಿ ಅವರಿಂದ ಯೋಗ ನೃತ್ಯ ಪ್ರದರ್ಶನವಾಯಿತು.

ಈ ವೇಳೆ ಅಧ್ಯಕ್ಷತೆ ವಹಿಸಿದ್ದ ಸುನಿತಾ ಪಾಟೀಲ ಉದ್ಘಾಟಿಸಿದರು, ಕಾರ್ಯದರ್ಶಿ ಶಾರದಾ ಪಾಟೀಲ್ ವಾರ್ಷಿಕ ವರದಿ ವಾಚಿಸಿದರು. ಗೌರವ ಸಮಿತಿಯ ರತ್ನಪ್ರಭಾ ಬೆಲ್ಲದ, ಖಜಾಂಚಿ ಶೋಭಾ ಪಾಟೀಲ, ಶೈಲಾ ಪಾಟೀಲ, ವಿದ್ಯಾ ಗೌಡರ, ಮತ್ತು ಇತರರು ಉಪಸ್ಥಿತರಿದ್ದರು. ಭಕ್ತಿ ನೃತ್ಯ ಪ್ರದರ್ಶನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಸಂಘಟನೆ ಪದಾಧಿಕಾರಿಗಳು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಎಲ್ಲರೂ ಕೈ ಜೋಡಿಸುವುದರಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ: ಚೈತನ್ಯ ಕುಲಕರ್ಣಿ

ಪ್ರಯತ್ನ ಸಂಘಟನೆ 15ನೇ ವಾರ್ಷಿಕೋತ್ಸವ ಉದ್ಘಾಟನೆ

ಬೆಳಗಾವಿ : ರಾಜಕಾರಣಿಗಳಿಂದಲೇ ಎಲ್ಲವನ್ನೂ ನಿರೀಕ್ಷೆ ಮಾಡುವ ಬದಲು ಎಲ್ಲರೂ ಸೇರಿ ಕೆಲಸ ಮಾಡುವುದರಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯವಿದೆ ಎಂದು ಕ್ರೆಡೈ ಅಫೋರ್ಡೇಬಲ್ ಹೌಸಿಂಗ್ ಕಮಿಟಿಯ ರಾಷ್ಟ್ರೀಯ ಅಧ್ಯಕ್ಷರೂ, ಸಿಜಿಕೆ ಗ್ರುಪ್ ವ್ಯವಸ್ಥಾಪಕ ನಿರ್ದೇಶಕರೂ ಆಗಿರುವ ಚೈತನ್ಯ ಕುಲಕರ್ಣಿ ಹೇಳಿದ್ದಾರೆ.

ಬೆಳಗಾವಿಯಲ್ಲಿ ಭಾನುವಾರ ಸಂಜೆ ಪ್ರಯತ್ನ ಸ್ವಯಂ ಸೇವಾ ಸಂಸ್ಥೆಯ 15ನೇ ವಾರ್ಷಿಕೋತ್ಸವ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಸಮಾಜದಲ್ಲಿ ದಾನಿಗಳಿಗೆ ಕೊರತೆ ಇಲ್ಲ, ಆದರೆ ಅದನ್ನು ಸತ್ಪಾತ್ರರಿಗೆ ತಲುಪಿಸುವವರು ಕಡಿಮೆ. ಆದರೆ ಪ್ರಯತ್ನ ಸಂಘಟನೆ ಯಾವುದೇ ಫಲಾಪೇಕ್ಷೆ ಇಲ್ಲದೆ ನಿಸ್ವಾರ್ಥವಾಗಿ ಪಡೆದ ದಾನವನ್ನು ಅವಶ್ಯವುಳ್ಳವರಿಗೆ ತಲುಪಿಸುವ ಕೆಲಸ ಮಾಡುತ್ತಿದೆ ಎಂದು ಪ್ರಶಂಸಿಸಿದರು.

ಮಹಿಳೆಯರು ತಮ್ಮ ಕೆಲಸದ ನಡುವೆಯೂ ಸಮಯ ಮಾಡಿಕೊಂಡು ಈ ರೀತಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿದ್ದಾರೆ. ಇಂತಹ ಸಂಘಟನೆಯ ಕುರಿತು ಜನರಿಗೆ ಮಾಹಿತಿ ಕೊರತೆ ಇದೆ. ಸರಿಯಾದ ಮಾಹಿತಿ ತಲುಪಿಸಿದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ದಾನಿಗಳು ಖಂಡಿತವಾಗಿ ಮುಂದೆ ಬರುತ್ತಾರೆ. ಪ್ರಯತ್ನ ಸಂಘಟನೆಯನ್ನು ದೊಡ್ಡಮಟ್ಟದಲ್ಲಿ ಬೆಳೆಸಲು ಕೈಜೋಡಿಸುತ್ತೇನೆ ಎಂದು ಚೈತನ್ಯ ಕುಲಕರ್ಣಿ ತಿಳಿಸಿದರು.

ಫೋರಂ ಆಫ್ ಅಸೋಸಿಯೇಶನ್ ಆಫ್ ಬೆಳಗಾವಿ (ಎಫ್ಒಎಬಿ) ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ನೀಡಿದ ಅವರು, ಉಡಾನ್ ಬೆಳಗಾವಿಗೆ ಬರುವಲ್ಲಿ, ವಿಟಿಯು ವಿಭಜನೆ ತಪ್ಪಿಸುವಲ್ಲಿ ಸಂಘಟನೆ ಮಹತ್ವದ ಪಾತ್ರ ವಹಿಸಿದೆ. ಮುಂದಿನ ದಿನಗಳಲ್ಲಿ ಸಂಘಟನೆಯನ್ನು ಇನ್ನಷ್ಟು ಬೆಳೆಸಲಾಗುವುದು ಎಂದು ತಿಳಿಸಿದರು. ಪ್ರಯತ್ನ ಸಂಘಟನೆಗೆ ನಿರಂತರವಾಗಿ ದೇಣಿಗೆ ನೀಡುತ್ತ ಬಂದಿರುವ ದಾನಿಗಳನ್ನು ಸನ್ಮಾನಿಸಿದ ಸುರೇಶ ಅಂಗಡಿ ಎಜುಕೇಶನ್ ಫೌಂಡೇಶನ್ ನಿರ್ದೇಶಕಿ ಡಾ.ಸ್ಫೂರ್ತಿ ಅಂಗಡಿ ಮಾತನಾಡಿ, ಪ್ರಯತ್ನ ಸಂಘಟನೆ ಕಳೆದ 15 ವರ್ಷದಲ್ಲಿ ಸಮಾಜಕ್ಕಾಗಿ ಬಹಳ ದೊಟ್ಟಮಟ್ಟದಲ್ಲಿ ಕೆಲಸ ಮಾಡಿದೆ. ಇಂತಹ ಅಪರೂಪದ ಸಂಘಟನೆಗಳ ಜೊತೆ ಸಮಾಜ ಕೈ ಜೋಡಿಸಿದರೆ ಹೆಚ್ಚು ಹೆಚ್ಚು ಅವಶ್ಯಕತೆ ಉಳ್ಳವರನ್ನು ತಲುಪಲು ಸಾಧ್ಯವಾಗುತ್ತದೆ ಎಂದರು.

ಮುಂದಿನ ದಿನಗಳಲ್ಲಿ ಪ್ರಯತ್ನ ಸಂಘಟನೆಗೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಸುರೇಶ ಅಂಗಡಿ ಫೌಂಡೇಶನ್ ನಿಂದ ಬಡ, ಪ್ರತಿಭಾವಂತ ಮಕ್ಕಳಿಗೆ ಪ್ರಯತ್ನ ಸಂಘಟನೆಯ ಮೂಲಕ ವಿದ್ಯಾರ್ಥಿ ವೇತನ ನೀಡಲು ಸಿದ್ಧ, ಜೊತೆಗೆ ಯಾವುದೇ ನೆರವು ಅಪೇಕ್ಷಿಸಿದರೂ ತಾವು ಕೈ ಜೋಡಿಸುವುದಾಗಿ ತಿಳಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಹಿರಿಯ ಪತ್ರಕರ್ತ ಎಂ.ಕೆ.ಹೆಗಡೆ, ಸಮಾಜ ಸೇವೆಗಿಂತ ಸ್ವಯಂ ಸೇವೆ ಮಾಡಿಕೊಳ್ಳುವ ಸ್ವಯಂ ಸೇವಾ ಸಂಘಟನೆಗಳೇ ಹೆಚ್ಚಾಗಿರುವ ಇಂದಿನ ದಿನಗಳಲ್ಲಿ ಪ್ರಯತ್ನದಂತಹ ನಿಸ್ವಾರ್ಥ ಸಂಘಟನೆಗಳು ಮಾಡುತ್ತಿರುವ ಕಾರ್ಯ ಸ್ತುತ್ಯಾರ್ಹವಾಗಿದೆ. ಪ್ರಯತ್ನ ಸಂಘಟನೆ ಬಹಳ ದೊಡ್ಡದಾಗಿ ಬೆಳೆಯದಿರಬಹುದು, ಆದರೆ ಸಂಗ್ರಹವಾದ ಹಣದಲ್ಲಿ ಒಂದು ಪೈಸೆಯೂ ದುರುಪಯೋಗವಾಗದ ರೀತಿಯಲ್ಲಿ ಅದನ್ನು ಸಮಾಜಕ್ಕೆ ತಲುಪಿಸುವ ಕೆಲಸವನ್ನು ಈ ಒಂದೂವರೆ ದಶಕದಲ್ಲಿ ಮಾಡುತ್ತ ಬಂದಿದೆ ಎಂದರು.

ವಿಶೇಷವಾಗಿ, ಅನಾಥಾಶ್ರಮಗಳಿಗೆ, ವೃದ್ಯಾಶ್ರಮಗಳಿಗೆ, ಶಾಲೆಗಳಿಗೆ, ಬಡ ಮಕ್ಕಳಿಗೆ, ವಿದ್ಯಾರ್ಥಿಗಳಿಗೆ, ಅವರ ಅಗತ್ಯಗಳನ್ನು ತಿಳಿದುಕೊಂಡು ಪ್ರತಿ 2 ತಿಂಗಳಿಗೊಂದು ಕಾರ್ಯಕ್ರಮದ ಮೂಲಕ

ಸಹಾಯ ಮಾಡುತ್ತ ಬಂದಿದೆ. ತಾವು ನೀಡಿದ ದೇಣಿಗೆ ಅಥವಾ ತಾವು ಮಾಡಿದ ದಾನ ಸಾರ್ಥಕವಾಯಿತು ಎಂದು ಕೊಟ್ಟವರಿಗೆ ಅನಿಸುವ ರೀತಿಯಲ್ಲಿ ಪ್ರಯತ್ನ ಸತ್ಪಾತ್ರರಿಗೆ ತಲುಪಿಸುತ್ತ ಬಂದಿದೆ.

ಸಮುದಾಯಗಳನ್ನು ಸಬಲೀಕರಣಗೊಳಿಸಲು, ಶಿಕ್ಷಣವನ್ನು ಉತ್ತೇಜಿಸಲು, ಪರಿಸರವನ್ನು ರಕ್ಷಿಸಲು ನಿರಂತರ ಕೆಲಸ ಮಾಡುತ್ತ ಬಂದಿದೆ. ಹಾಗಾಗಿ ಈ 15 ವರ್ಷ ಸಾರ್ಥಕ 15 ವರ್ಷವಾಗಿದೆ. ಇದೇ ಬದ್ಧತೆಯನ್ನು ಉಳಿಸಿಕೊಂಡು ಮುಂದಿನ ದಿನಗಳಲ್ಲಿ ಸಹ ಒಳ್ಳೆಯ ಕೆಲಸವನ್ನು ಮುಂದುವರಿಸಲಿ ಎಂದು ಅವರು ಹೇಳಿದರು. ದಾನಿಗಳಾದ ಮಲ್ಲಿಕಾ ಆಚಾರ್ಯ, ಗಾಯತ್ರಿ ಪಂಡಿತ, ಆರತಿ ಕುಲಕರ್ಣಿ, ಸ್ಮಿತಾ ದೀಕ್ಷಿತ, ಪ್ರಶಾಂತ ಶಿವಕುಮಾರ ಅವರನ್ನು ಹಾಗೂ ಕ್ರೀಡಾಪಟು ತನಿಷ್ಕಾ ಕಾಲಭೈರವ್ ಅವರನ್ನು ಸನ್ಮಾನಿಸಲಾಯಿತು. ಪ್ರಯತ್ನ ಸಂಘಟನೆ ಸದಸ್ಯರೆಲ್ಲ ಸೇರಿ ಅಧ್ಯಕ್ಷೆ ಶಾಂತಾ ಆಚಾರ್ಯ ಅವರನ್ನು ಸತ್ಕರಿಸಿದರು. ದಕ್ಷ ಬಾಲೋಜಿ ಪ್ರಾರ್ಥನೆ ಹಾಡಿದರು. ಪ್ರಯತ್ನ

ಮುಗಳಖೋಡದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ

ಮುಗಳಖೋಡ: ಕರ್ನಾಟಕ ಚಾಲಕರ ಒಕ್ಕೂಟ (ರಿ) ಬೆಂಗಳೂರು ಇದರ ರಾಜ್ಯಾಧ್ಯಕ್ಷ ಜಿ. ನಾರಾಯಣ ಸ್ವಾಮಿ ಅವರ ಹುಟ್ಟು ಹಬ್ಬದ ಪ್ರಯುಕ್ತ ಮುಗಳಖೋಡ ಘಟಕದ ಎಲ್ಲ ವಾಹನ ಚಾಲಕರು ಸೇರಿ ಕುಲ್ಲೋಳ್ಳಿ ನೇತ್ರಾಲಯ ಸಾಂಗಲಿ ಇವರ ಸಹಯೋಗದೊಂದಿಗೆ ಪಟ್ಟಣದ ಹನುಮಾನ ದೇವಸ್ಥಾನದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಆಯೋಜಿಸಿದ್ದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ರಾಜ್ಯ ಪ್ರಚಾರ ಸಮಿತಿ ಅಧ್ಯಕ್ಷ ಆನಂದ ಯರಡತ್ತಿ ಪಟ್ಟಣದ ವೃದ್ಧರು, ಬಡವರು ಹಾಗೂ ಮಹಿಳೆಯರು ಕಣ್ಣಿನ ಪರೀಕ್ಷೆ ಮತ್ತು ಚಿಕಿತ್ಸೆಗಾಗಿ ವಿವಿಧ ನಗರಗಳಿಗೆ ತೆರಳುವುದನ್ನು ಗಮನಿಸಿ ಪಟ್ಟಣದ ಚಾಲಕರ ಒಕ್ಕೂಟ ಜೂನ್ 15 ರಂದು ನಡೆದ ಜಿ. ನಾರಾಯಣ ಸ್ವಾಮಿ ಅವರ ಜನ್ಮದಿನದ ಪ್ರಯುಕ್ತ ರವಿವಾರ 22 ರಂದು ಮುಗಳಖೋಡ ಪಟ್ಟಣದಲ್ಲಿ ಈ ಉಚಿತ ಕಣ್ಣಿನ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದರು.

ಹೆಚ್ಚಿನ ಶಸ್ತ್ರ ಚಿಕಿತ್ಸೆಗೆ ಸಾಂಗಲಿ ಕುಲ್ಲೋಳಿ ನೇತ್ರಾಲಯಕ್ಕೆ ಆಗಮಿಸುವ ಜನರಿಗೆ ವಾಹನ, ವಸತಿ ಮತ್ತು ಊಟದ ವ್ಯವಸ್ಥೆ ಹಾಗೂ ಕರಿ ಕನ್ನಡಕ ಉಚಿತವಾಗಿ ನೀಡಲಾಗುವುದು ಎಂದು ವೈದ್ಯ ಬಿಲಾಲ ಶೇಖ ಹೇಳಿದರು.

ಕ.ಚಾ.ಒಕ್ಕೂಟ ಬೆಳಗಾವಿ ಜಿಲ್ಲಾಧ್ಯಕ್ಷ ಅರುಣ ಪಾಟೀಲ ಹಾಗೂ ಗೌರವಾಧ್ಯಕ್ಷ ಬಾಳಾಸಾಬ ಉದಗಟ್ಟಿ ಮಾತನಾಡಿ ನಮ್ಮ ಜೀವಿತಾವಧಿಯವರೆಗೆ ಪ್ರಕೃತಿಯ ಸೌಂದರ್ಯ ಸವಿಯಲು, ಈಗಿನ ಆಹಾರ ಪದ್ಧತಿಗೆ ಅನುಗುಣವಾಗಿ ನಾವೆಲ್ಲಾ ಪ್ರತಿ ವರ್ಷ ಕಣ್ಣಿನ ಮತ್ತು ಆರೋಗ್ಯ ಪರೀಕ್ಷೆ ಮಾಡಿಸಿಕೊಳ್ಳಬೇಕಾಗಿದೆ. ಈ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡ ಪಟ್ಟಣದ ಚಾಲಕರ ಕಾರ್ಯ ಶ್ಲಾಘನೀಯ ಎಂದರು. ಆಗಮಿಸಿದ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳನ್ನು ಸತ್ಕರಿಸಲಾಯಿತು.

150 ಕ್ಕೂ ಹೆಚ್ಚು ಜನರು ಕಣ್ಣಿನ ತಪಾಸಣೆ ಮಾಡಿಸಿಕೊಂಡು ಈ ಉಚಿತ ಸೌಲಭ್ಯದ ಸದುಪಯೋಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕರ್ನಾಟಕ ಚಾಲಕರ ಒಕ್ಕೂಟ (ರಿ) ಮುಗಳಖೋಡ ಘಟಕದ ಅಧ್ಯಕ್ಷ ಗೋಪಾಲ ಮೆಕ್ಕಳಕಿ, ನಿವೃತ್ತ ಶಿಕ್ಷಕರಾದ ಮಹದೇವ ಭಜಂತ್ರಿ, ಪದಾಧಿಕಾರಿಗಳಾದ ರಾಜು ಕುಲಿಗೋಡ, ಸಂಜು ಭಜಂತ್ರಿ, ಮಾಳು ಅಳಗೋಡಿ, ಮಾರುತಿ ಭಜಂತ್ರಿ, ಸಿದ್ದು ಅಲಕನೂರ, ಮಹೇಶ ಘಟನಟ್ಟಿ, ನಾರಾಯಣ ಕಾಂಬಳೆ, ಜಾವಿದ್ ಮೋಮಿನ, ಗಿರೀಶ್ ಕದಂ, ರಾಜು ಕದಂ, ಹನುಮಂತ ಹಲ್ಕಿ ಸೇರಿದಂತೆ ಸರ್ವ ಸದಸ್ಯರು ಉಪಸ್ಥಿತರಿದ್ದರು.

ತಾಲೂಕಾ ಬಾಲಭವನ ಸೊಸೈಟಿ ಕಾರ್ಯಕ್ರಮ

ಕಾರವಾರ, ಕಾರವಾರದ ಸುಮತಿ ದಾಮ್ಲೆ ಹೈಸ್ಕೂಲ್‌ನಲ್ಲಿ ಇತ್ತೀಚೆಗೆ ನಡೆದ ಬಾಲಭವನ ಸೊಸೈಟಿ ಕಾರ್ಯಕ್ರಮವನ್ನು ನಗರಸಭೆ ಸದಸ್ಯೆ ಸಂಧ್ಯಾ ಬಾಡಕರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಬಾಲಭವನ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶೋಭಾ ಡಿ ಮುಕಟಗಾರ ಮಾತನಾಡಿ, ಇಂದಿನ ಯುಗ ಸ್ಪರ್ಧಾತ್ಮಕ ಯುಗವಾಗಿದ್ದು, ಮಕ್ಕಳು ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸುವುದು ಅತಿ ಮುಖ್ಯ ಆಗ ಮಾತ್ರ ನಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಹಾಗೂ ಭವಿಷ್ಯವನ್ನು ರೂಪಿಸಿಕೊಳ್ಳಲು ಅನುಕೂಲವಾಗುತ್ತದೆ . ಬಾಲ್ಯವಿವಾಹ ಹಾಗೂ ಫೋಕ್ಸೊ ಆಗುತ್ತಿದ್ದಲ್ಲಿ ನಮ್ಮ ಇಲಾಖೆಯ ಗಮನಕ್ಕೆ ಹಾಗೂ ಶಿಕ್ಷಕರಿಗೆ, ಪಾಲಕರಿಗೆ ಯಾವುದೇ ಮುಚ್ಚುಮರೆ ಇಲ್ಲದೇ ತಿಳಿಸಬೇಕು. ಮಕ್ಕಳು ತಮ್ಮ ಉತ್ತಮ ಭವಿಷ್ಯಕ್ಕಾಗಿ ವಿದ್ಯಾಭ್ಯಾಸ ಅಷ್ಟೇ ಅಲ್ಲದೇ ಉತ್ತಮ ಪೌಷ್ಟಿಕ ಆಹಾರ ಸೇವಿಸಬೇಕು, ಎಲ್ಲಾ ಕ್ಷೇತ್ರದಲ್ಲೂ ಭಾಗವಹಿಸಿ ಮುಂದೆ ಬರಬೇಕು ಎಂದರು.

ಕಾರ್ಯಕ್ರಮದಲ್ಲಿ ಸುಮತಿ ದಾಮ್ಲೆ ಹೈಸ್ಕೂಲ್ ಮುಖ್ಯೋಪಾಧ್ಯಾಯ ಅರುಣ ರಾಣೆ, ವಿದ್ಯಾರ್ಥಿಗಳು, ಶಿಕ್ಷಕರು, ಮೇಲ್ವಿಚಾರಕಿಯರು ಉಪಸ್ಥಿತರಿದ್ದರು.

****

ಅಚ್ಚುಕಟ್ಟು ಪ್ರದೇಶದಲ್ಲಿ ದ್ವಿದಳ ಧಾನ್ಯ ಬೆಳೆಗಳ ಮಹತ್ವ

ಧಾರವಾಡ : ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ), ಧಾರವಾಡ ಮತ್ತು ಕೃಷಿ ಮಹಾವಿದ್ಯಾಲಯ, ಹಗರಿ ಇವರ ಸಂಯುಕ್ತ ಆಶ್ರಯದಲ್ಲಿ ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲ್ಲೂಕಿನ ದಮ್ಮೂರಿನ ಶ್ರೀ ವೆಂಕಾವಧೂತ ಮಠದ ಸಭಾಂಗಣದಲ್ಲಿ ತುಂಗಭದ್ರಾ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಗೆ ಬರುವ ನೀರು ಬಳಕೆದಾರರ ಸಹಕಾರ ಸಂಘದ ಪದಾಧಿಕಾರಿಗಳು ಹಾಗೂ ರೈತರಿಗೆ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಈ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ), ಸಂಸ್ಥೆಯ ನಿರ್ದೇಶಕರಾದ ಡಾ॥ ಗಿರೀಶ ಎನ್. ಮರಡ್ಡಿರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳುವ ಕ್ರಮಗಳನ್ನು ವಿವರಿಸುತ್ತಾ, ಏಕಬೆಳೆ ಪದ್ಧತಿಯನ್ನು ಅಳವಡಿಸಿಕೊಳ್ಳುವುದರಿಂದ ಭೂಮಿಯ ಫಲವತ್ತತೆ ಕುಂಠಿತಗೊಂಡು, ಬರುಬರುತ್ತಾ ಇಳುವರಿ ಕಡಿಮೆಯಾಗುತ್ತದೆ ಎಂದು ತಿಳಿಸಿದರು. ದ್ವಿದಳ ಧಾನ್ಯಗಳಾದ ತೊಗರಿ, ಕಡಲೆ ಮತ್ತು ಇನ್ನಿತರ ಬೆಳೆಗಳನ್ನು ಬೆಳೆಯುವುದರಿಂದ ವಾತಾವರಣದಲ್ಲಿರುವ ಸಾರಜನಕವು ದ್ವಿದಳ ಧಾನ್ಯಗಳ ಬೇರಿನಲ್ಲಿರುವ ರೈಜೋಬಿಯಂ ಗಂಟುಗಳ ಮುಖಾಂತರ ಸ್ಥಿರೀಕರಣಗೊಂಡು ಮಣ್ಣಿನ ಫಲವತ್ತತೆ ಹೆಚ್ಚಾಗಿ, ಮಣ್ಣಿನ ಭೌತಿಕ ಮತ್ತು ಜೈವಿಕ ಗುಣಧರ್ಮಗಳು ಉತ್ತಮವಾಗುವುದರೊಂದಿಗೆ ಸಾವಯವ ಇಂಗಾಲದ ಮಟ್ಟವು ಸುಧಾರಿಸುತ್ತದೆ ಎಂದು ವಿವರಿಸಿದರು.

ಬೆಳೆಗಳಿಗೆ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕ ಗೊಬ್ಬರಗಳನ್ನು ಕೊಡುವುದರಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗಿ, ಇಳುವರಿ ಕಡಿಮೆಯಾಗುತ್ತದೆ. ಆದುದರಿಂದ ಪ್ರತಿಯೊಬ್ಬರು ತಮ್ಮ ಜಮೀನಿನ ಮಣ್ಣಿನ ಪರೀಕ್ಷೆ ಆಧಾರಿತ ಪೋಷಕಾಂಶಗಳನ್ನು ಬೆಳೆಗಳಿಗೆ ಒದಗಿಸಬೇಕೆಂದು ಕಿವಿಮಾತು ಹೇಳಿದರು. ಇದಕ್ಕಾಗಿ ಮಣ್ಣು ಮಾದರಿ ತೆಗೆಯುವ ವಿಧಾನವನ್ನು ರೈತರಿಗೆ ತಿಳಿಸಿದರು. ಕಾರ್ಯಾಗಾರದಲ್ಲಿ ಭಾಗವಹಿಸಿದ ಹಗರಿಯ ಕೃಷಿ ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಸತತ ಪರಿಶ್ರಮದಿಂದ ಹಾಗೂ ದೃಢ ಸಂಕಲ್ಪದಿಂದ ಯಶಸ್ಸನ್ನು ಸಾಧಿಸಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂದು ಸಲಹೆ ನೀಡಿದರು.

ಕೃಷಿ ಕಾರ್ಯ ಚಟುವಟಿಕೆಯಲ್ಲಿ ದಿನನಿತ್ಯ ನಮ್ಮನ್ನು ನಾವು ತೊಡಗಿಸಿಕೊಳ್ಳುವುದರಿಂದ ನಮ್ಮ ಬದುಕು ಭದ್ರವಾಗಲು ಸಾಧ್ಯ ಇಲ್ಲದಿದ್ದಲ್ಲಿ ಅನಗತ್ಯ ಖರ್ಚು ವೆಚ್ಚ ಹೆಚ್ಚಾಗುವುದರೊಂದಿಗೆ ಕೃಷಿಯಲ್ಲಿ ಸಣ್ಣ ಸಣ್ಣ ಕಾರ್ಯಗಳಿಗೂ ಕಾರ್ಮಿಕರನ್ನೇ ಅವಲಂಬಿಸುವ ಸಂದರ್ಭ ತಲೆದೋರುವುದು. ದುರ್ವ್ಯಸನಗಳಿಗೆ ಬಲಿಯಾಗುವುದು ಹೆಚ್ಚಾಗುವುದನ್ನು ತಪ್ಪಿಸಲು ಮೊದಲು ನಾವು ಕೃಷಿಯತ್ತ ಮುಖ ಮಾಡಬೇಕಿದೆ. ದಮ್ಮೂರಿನಲ್ಲಿ ನೀರು ಬಳಕೆದಾರರ ಸಹಕಾರ ಸಂಘವನ್ನು ಪುನಃಶ್ಚೇತನಗೊಳಿಸಿ ಬಲವರ್ಧನೆಗೊಳಿಸಬೇಕಿದೆ. ವಾಲ್ಮಿ ಸಂಸ್ಥೆಯು ಈ ಕುರಿತು ರೈತರಿಗೆ ತರಬೇತಿ ನೀಡಲು ಸದಾ ಸಿದ್ಧವಿದ್ದು, ಇದರ ಸದುಪಯೋಗಪಡೆಯುವಂತೆ ಕರೆನೀಡಿದರು.

ವಾಲ್ಮಿ ಸಂಸ್ಥೆಯ ಸಮಾಲೋಚರಕರಾದ ಶ್ರೀ ಸುರೇಶ್ ಕುಲಕರ್ಣಿ ಅವರು ಮಾತನಾಡುತ್ತಾ ತುಂಗಭದ್ರಾ ನೀರಾವರಿ ಯೋಜನೆ ಅಡಿ ಸುಮಾರು 9000 ಕ್ಕೂ ಅಧಿಕ ಎಕರೆ ಜಮೀನನ್ನು ದಮ್ಮೂರು ಗ್ರಾಮ ಹೊಂದಿದ್ದು ಇದರ ನಿರ್ವಹಣೆಯಲ್ಲಿ ಸಂಪೂರ್ಣ ನಿರ್ಲಕ್ಷತೆ ಕಂಡು ಬರುತ್ತದೆ. ಇದರಿಂದ ತಮ್ಮ ಆರ್ಥಿಕತೆಗೆ ಹಾಗೂ ತಾವು ಹೊಂದಿರುವ ಫಲವತ್ತಾದ ಕೃಷಿ ಭೂಮಿಯ ಗುಣಮಟ್ಟ ಹಾನಿಗೊಳಗಾಗುತ್ತದೆ. ಸರ್ಕಾರವೇ ತಮಗೆ ನೀರಿನ ನಿರ್ವಹಣೆಗಾಗಿ ನೀಡಲಾದ ಕಾನೂನಿನ ಭರವಸೆ ಹಾಗೂ ಅದರೊಂದಿಗೆ ವಿವಿಧ ಆರ್ಥಿಕ ಸೌಲಭ್ಯಗಳನ್ನು ಕಳೆದುಕೊಳ್ಳುತ್ತಿದ್ದೀರಿ ಎಂದು ತಿಳಿಸಿದರು. ನೀರಾವರಿ ಕಾಯ್ದೆ ಹಾಗೂ ಸಹಕಾರ ಸಂಘಗಳ ಕಾಯ್ದೆಯಡಯಲ್ಲಿ ನೀರು ಬಳಕೆದಾರ ಸಹಕಾರ ಸಂಘಗಳನ್ನು ರಚಿಸಿಕೊಳ್ಳಲು ಮುಂದಾಗಿ ಈ ಕುರಿತಾಗಿ ಮಾಹಿತಿಗಾಗಿ ವಾಲ್ಮಿ ಧಾರವಾಡದಲ್ಲಿ ತರಬೇತಿ ಪಡೆಯಲು ಕರೆ ನೀಡಿದರು.

ವಾಲ್ಮಿ ಸಂಸ್ಥೆಯ ಇನ್ನೊಬ್ಬ ಸಮಾಲೋಚಕರಾದ ಶ್ರೀ ರಾಘವೇಂದ್ರ ತೆಗ್ಗಿಯವರು ಮೆಣಸಿನಕಾಯಿಯನ್ನು ವಿಪರೀತವಾಗಿ ಬಾಧಿಸುವ ಮುಟುರು ರೋಗ, ಕೀಟಗಳು, ಬೆಳೆಗಳ ಬೇರುಗಳನ್ನು ತಿಂದು ಹಾಳು ಮಾಡುವ ಗೊಣ್ಣೆ ಹುಳ ಹಾಗೂ ಇಲಿಗಳನ್ನು ನಿಯಂತ್ರಿಸುವ ಬಗ್ಗೆ ವಿವರವಾಗಿ ರೈತರಿಗೆ ತಿಳಿಸಿದರು.

ಕಾರ್ಯಾಗಾರದಲ್ಲಿ ಭಾಗವಹಿಸಿದ ಹಗರಿಯ ಕೃಷಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಮತ್ತು ರಾಷ್ಟ್ರೀಯ ಯೋಜನಾ ಘಟಕದ ಸಂಯೋಜಕರಾದ ಡಾ. ನಾಗೇಶ ಜಾನೇಕಲ್‌ರವರು ಎಲ್ಲರನ್ನು ಸ್ವಾಗತಿಸಿ ಸಿರಿ ಧಾನ್ಯಗಳ ಮಹತ್ವ ಅವುಗಳ ಸೇವನೆಯಿಂದ ಮನುಷ್ಯನ ಆರೋಗ್ಯಕ್ಕೆ ಆಗುವ ಲಾಭಗಳು ಮತ್ತು ಸಾವಯವ ಕೃಷಿಯ ಮಹತ್ವದ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು. ವಾಲ್ಮಿ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಶ್ರೀ ನಾಗರಾಜ್ ತಹಸಿಲ್ದಾರ್‌ರವರು ಕಾರ್ಯಕ್ರಮವನ್ನು ಸಂಯೋಜಿಸಿ ಕಾರ್ಯಾಗಾರಕ್ಕೆ ಎಲ್ಲರನ್ನು ಪರಿಚಯಿಸಿದರು.

ಕಾರ್ಯಾಗಾರದಲ್ಲಿ ಕುರುಗೋಡು ಕೃಷಿಕ ಸಮಾಜದ ಅಧ್ಯಕ್ಷರಾದ ಶ್ರೀ ಆದಿ ನಾರಾಯಣ ರೆಡ್ಡಿರವರು ಉದ್ಘಾಟಿಸಿದರು ಹಾಗೂ ದಮ್ಮೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಲಕ್ಷ್ಮೀ ಮಂಜುನಾಥ್ ಉಪಾಧ್ಯಕ್ಷರಾದ ಶ್ರೀಮತಿ ಗಂಗಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಎನ್ ಮಲ್ಲಿಕಾರ್ಜುನ, ಶ್ರೀ ವೆಂಕಾವಧೂತ ಸೇವಾ ಟ್ರಸ್ಟಿನ ಅಧ್ಯಕ್ಷರಾದ ಶ್ರೀ ಜಿಂಕಲ್ ವೆಂಕಟೇಶ, ಉಪಾಧ್ಯಕ್ಷರಾದ ಶ್ರೀ ಲಕ್ಷ್ಮೀಕಾಂತರೆಡ್ಡಿ, ಪಾ.ಕೃ.ಪ.ಸ. ಸಂಘದ ಅಧ್ಯಕ್ಷರಾದ ಶ್ರೀ ಸಂಜೀವರೆಡ್ಡಿ, ಉಪಾಧ್ಯಕ್ಷರಾದ ಶ್ರೀ ಡಿ. ಅಂಜನಪ್ಪ, ನೀ.ಬ.ಸ.ಸಂಘ, ದಮ್ಮೂರಿನ ಪದಾಧಿಕಾರಿಗಳು, ರೈತರು ಹಾಗೂ ಕೃಷಿ ಮಹಾವಿದ್ಯಾಲಯ ಹಗರಿಯ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಕಾಪಿಕಾನ್-2025 ರಾಜ್ಯ ವೈದ್ಯಕೀಯ ಸಮ್ಮೇಳನದಲ್ಲಿ ಡಾ.ಜ್ಞಾನೇಶ ಮೋರಕರ್ ಇವರ ಕಾರ್ಯಸಾಧನೆಗೆ ಪ್ರಶಸ್ತಿಯ

ಬೆಳಗಾವಿ:ಜೂನ್:21: ಕರ್ನಾಟಕ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಎಸ್.ಡಿ. ಎಂ ಧಾರವಾಡ ಮತ್ತು ಕೆ.ಎಲ್.ಇ ಸಂಸ್ಥೆಗಳ ಸಹಯೋಗದೊಂದಿಗೆ ಕರ್ನಾಟಕ ವೈದ್ಯರ ಸಂಘ ಹುಬ್ಬಳ್ಳಿ-ಧಾರವಾಡ ಶಾಖೆ, ಕರ್ನಾಟಕ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಸಭಾಂಗಣದಲ್ಲಿ ಮೂರು ದಿನಗಳ 42ನೇ ದಕ್ಷಿಣ ವಲಯ ಫಿಜಿಸಿಯನ್‌ಗಳ ಕಾಪಿಕಾನ್-2025 ರಾಜ್ಯ ಸಮ್ಮೇಳನ ನಡೆಯಿತು.

ಈ ಸಮ್ಮೇಳನದಲ್ಲಿ ವಿವಿಧ ಕ್ಷೇತ್ರಗಳ ಸುಮಾರು 1800 ಪ್ರಸಿದ್ಧ ವೈದ್ಯರು ಭಾಗವಹಿಸಿದ್ದರು. ಭವಿಷ್ಯದ ಭಾರತ ನಿರ್ಮಾಣದಲ್ಲಿ ವೈದ್ಯರ ಕೊಡುಗೆ ಮಹತ್ವವನ್ನು ಹೊಂದಿದ್ದು, ವೈದ್ಯರಿಗೆ ದೇವರ ಸ್ಥಾನ ನೀಡಲಾಗಿದೆ. ಬಾಹ್ಯಾಕಾಶ, ಕ್ಷೇತ್ರದಲ್ಲಿ ಸಂಶೋಧನೆಗಳು ಸಾಗಿ ಅನುಷ್ಠಾನಗೊಳ್ಳುತ್ತಿರುವಂತೆ ವೈದ್ಯಕೀಯ ಕ್ಷೇತ್ರದಲ್ಲೂ ಸಂಶೋಧನೆಗಳು ನಿರಂತರ ನಡೆಯುವ ಮೂಲಕ ಇನ್ನೂ ಉತ್ತಮ ವೈದ್ಯಕೀಯ ಸೇವೆ ಜನ-ಸಾಮಾನ್ಯರಿಗೆ ದೊರಕುವಂತಾಗಲಿ ಎಂದು ಸಮ್ಮೇಳನದಲ್ಲಿ ಆಶಯ ವ್ಯಕ್ತಪಡಿಸಲಾಯಿತು.

ಸಮ್ಮೇಳನದಲ್ಲಿ ಡಾ.ಟಿ.ಬಿ.ಬಸವರಾಜೇಂದ್ರ ಸ್ಮರಣಾರ್ಥ "ಎಚ್.ಐ.ವಿ ಚಿಕಿತ್ಸೆಯ ಹಾದಿ: ಹಿಂದಿನ ಸ್ಥಿತಿಗತಿಯು, ಪ್ರಸ್ತುತ ದೃಶ್ಯ ಮತ್ತು ಭವಿಷ್ಯದ ದಿಕ್ಕು" ಎಂಬ ವಿಷಯದ ಕುರಿತು ಉಪನ್ಯಾಸವನ್ನು ಡಾ.ಜ್ಞಾನೇಶ ಮೋರಕರ್, ಸಾಮನ್ಯ ವೈದ್ಯಕೀಯ ವಿಭಾಗದ ಪ್ರಾಧ್ಯಾಪಕರು, ಜೆ.ಎನ್.ಎಂಸಿ, ಕೆಎಎಚ್‌ಇಆರ್, ಬೆಳಗಾವಿ ಇವರು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಡಾ.ಜ್ಞಾನೇಶ ಮೋರಕರ್ ಅವರ ಎಚ್.ಐ.ವಿ ಕುರಿತಾಗಿ ಕಳೆದ 15 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು, ಅವರ ವೈದ್ಯಕೀಯ ಕಾರ್ಯ ಹಾಗೂ ಸಾಧನೆಯನ್ನು ಮೆಚ್ಚಿ ಡಾ.ಟಿ.ಬಿ.ಬಸವರಾಜೇಂದ್ರ ಸ್ಮರಣಾರ್ಥ ನೀಡುವ ಪಾರಿತೋಷಕವನ್ನು ಡಾ.ಜ್ಞಾನೇಶ ಮೋರಕರ್ ಅವರಿಗೆ ನೀಡಲಾಯಿತು.

ಸರ್ಕಾರಿ ಶಾಲೆಗಳಿಂದ ಅರ್ಜಿ ಆಹ್ವಾನ

ಗದಗ : 24 : 2025-26 ನೇ ಸಾಲಿನಲ್ಲಿ ನಮ್ಮೂರ ಶಾಲೆಗೆ ನಮ್ಮ ಯುವಜನರು ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರಿರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಆಯ್ಕೆಯಾದ ಪ್ರತಿ ಶಾಲೆಗೆ ಪ್ರೋತ್ಸಾಹವಾಗಿ ತಲಾ ರೂ.1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲು ತೀರ್ಮಾನಿಸಿದೆ.

ಸದರಿ ಅನುದಾನದಲ್ಲಿ ರೂ.10000/-ಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ರೂ.90000/- ಗಳನ್ನು ಶಾಲೆಯ ಎಸ್.ಡಿ.ಎಂ.ಸಿ. ಗೆ ಅಗತ್ಯ ಕ್ರೀಡಾ ಸಾಮಗ್ರಿಗಳನ್ನು ಖರೀದಿ ಮಾಡಲು ಉಲ್ಲೇಖಿತ ಪತ್ರದನ್ವಯ ಸೂಚಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ 2024-25 ನೇ ಸಾಲಿನ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿರುವ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳನ್ನು ಹೊಂದಿದ ಸರ್ಕಾರಿ ಶಾಲೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಸರ್ಕಾರಿ ಶಾಲೆಗಳು ದಿ:25-06- 2025 ರೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಲಿಖಿತವಾಗಿ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ 08372-238345 ಗೆ ಸಂಪರ್ಕಿಸಲು ಕೋರಲಾಗಿದೆ

ಓದು ನಮ್ಮ ಬದುಕಿಗೆ ಬೆಳಕಾಗಿದೆ; ಮಕ್ಕಳು ಪ್ರಾಮಾಣಿಕವಾಗಿ, ಮನಮುಟ್ಟುವಂತೆ ಓದುಬರಹ ಮಾಡಬೇಕು; ಅದು ಉನ್ನತ ಸಾಧನೆಗೆ ಸಹಕಾರಿ ಆಗುತ್ತದೆ - ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ: ನಮ್ಮಂತ ಅನೇಕ ಐಎಎಸ್, ಐಪಿಎಸ್ ಅಧಿಕಾರಿಗಳಿಗೆ ಪ್ರಾಮಾಣಿಕ ಓದು, ಕಠಿಣ ಪರಿಶ್ರಮಗಳೆ ಬದುಕಿನ ಬೆಳಕಾಗಿವೆ. ಮಕ್ಕಳು ಪ್ರಾಮಾಣಿಕವಾಗಿ, ಮನಮುಟ್ಟುವಂತೆ ಓದಬೇಕು. ಈ ಓದು ಉನ್ನತ ಹುದ್ದೆ, ಉತ್ತಮ ಸ್ಥಾನಮಾನ, ಹೆಚ್ಚಿನ ಸಾಧನೆಗಳಿಗೆ ಸಹಕಾರಿಯಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ

ಅಪೂರ್ಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿಯೇ ಪೂರ್ಣಗೊಳಿಸಿ

ಅಗಸ್ಟ 15 ರಂದು ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಗೆ ಕ್ರಮ ವಹಿಸಿ :ಸಚಿವ ಎಚ್.ಕೆ.ಪಾಟೀಲ

ಗದಗ : ಅಪೂರ್ಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಮೂಲಕ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಕಾರ್ಯಕ್ಕೆ ಅಧಿಕಾರಿ ವರ್ಗ ಸದಾ ಸರ್ವಸನ್ನದ್ಧ ಎಂಬುದನ್ನು ಸಾಬೀತುಪಡಿಸಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನೆನೆಗುದಿಗೆ ಬಿದ್ದಿರುವ ಅಪೂರ್ಣ ಕಾಮಗಾರಿಗಳ ಕುರಿತು ಪ್ರಗತಿ ಪರಿಶೀಲನೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಸಚಿವರು ಮಾತನಾಡಿದರು.

ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯ ಸೌಲಭ್ಯ ಬಡಜನರಿಗೆ ತಲುಪಿಸುವ ಮಹತ್ತರ ಜವಾಬ್ದಾರಿ ಇಲಾಖೆಯ ಅಧಿಕಾರಿಗಳದ್ದಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ವಿಶೇಷ ಆಸಕ್ತಿಯಿಂದ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕೆಂದು ಬಡವರು ಮತ್ತು ಕಾರ್ಮಿಕರಿಗೆ ಕೈಗೆಟಕುವ ದರದಲ್ಲಿ ಊಟ, ಉಪಹಾರ ಒದಗಿಸುವ ಮಹಾತ್ವಾಕಾಂಕ್ಷಿ ಇಂದಿರಾ ಕ್ಯಾಂಟೀನ್ ಯೋಜನೆಯು ಅನುಷ್ಠಾನಗೊಂಡಿದೆ. ಗದಗ ನಗರದ ಪಂಡಿತ ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದ ಆವರಣದಲ್ಲಿ ಅಗಸ್ಟ 15 ರಂದು ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲು ಕ್ರಮ ಕೈಗೊಳ್ಳಬೇಕು ಎಂದರು. ಈ ಕುರಿತು ಸಂಬಂಧಿತ ಅಧಿಕಾರಿ ವರ್ಗ ಕಾರ್ಯೋನ್ಮುಖವಾಗಲು ನಿರ್ದೇಶನ ನೀಡಿದರು.

ಗಂಗಿಮಡಿಯಲ್ಲಿ ಬಡವರಿಗಾಗಿ ಜಿ+ ಮಾದರಿಯಲ್ಲಿನ 3630 ಮನೆಗಳ ಸಮುಚ್ಚಯ ನಿರ್ಮಾಣ ಕಾಮಗಾರಿ ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು ಕಾಮಗಾರಿಗಳನ್ನು ತೀವ್ರಗತಿಯಲ್ಲಿ ಪೂರ್ಣಗೊಳಿಸಲು ಇರುವ ತಾಂತ್ರಿಕ ತೊಂದರೆ ಪರಿಹಾರ ಕಂಡುಕೊಳ್ಳಿ. ಸರ್ಕಾರದ ಹಂತದಲ್ಲಿ ದೊರೆಯಬೇಕಾದ ಅನುಮೋದನೆಗಳಿದ್ದಲ್ಲಿ ತಮ್ಮ ಗಮನಕ್ಕೆ ತರುವ ಮೂಲಕ ಪರಿಹಾರ ಕಂಡುಕೊಳ್ಳಬೇಕು. ಒಟ್ಟಾರೆ ಬಡವರಿಗಾಗಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಾಮಗಾರಿ ಪೂರ್ಣಗೊಳಿಸಲು ಶ್ರಮಿಸುವಂತೆ ತಿಳಿಸಿದರು.

ಹಲವು ವರ್ಷದಿಂದ ತಾ.ಪಂ. ಕಚೇರಿಯ ನೂತನ ಕಟ್ಟಡದ ನಿರ್ಮಾಣ ಕಾರ್ಯ ನಿಧಾನಗತಿಯಲ್ಲಿ ಸಾಗಿದೆ. ಪರಿಷ್ಕೃತ ಅಂದಾಜು ವೆಚ್ಚ ಪಡೆದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಸುಮ್ಮನೆ ಕೂಡದೇ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದು ಸರ್ಕಾರದಿಂದ ಅನುದಾನ ಬಿಡುಗಡೆ ಸೇರಿದಂತೆ ಎಲ್ಲ ರೀತಿಯ ಒಪ್ಪಿಗೆ ಪಡೆದು ಕಾಮಗಾರಿ ಪೂರ್ಣಗೊಳಿಸಲು ಗಮನ ಹರಿಸುವಂತೆ ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಅವರಿಗೆ ಸೂಚಿಸಿದರು.

ಬೇಸಿಗೆಯಲ್ಲಿ ಅವಳಿ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ತಗ್ಗಿಸಲು ಕೈಗೊಂಡ ಯೋಜನೆ ಕೆರೆ ನಿರ್ಮಾಣ ಕಾಮಗಾರಿಯಾಗಿದೆ. ಈ ಕೆರೆ ನಿರ್ಮಾಣ ಕಾಮಗಾರಿಯನ್ನು ಪಾಪನಾಶಿ ಹತ್ತಿರ ನಿರ್ಮಿಸಲು ಉದ್ದೇಶಿಸಿ ಹಲವು ವರ್ಷಗಳೇ ಗತಿಸಿದರೂ ಕಾಮಗಾರಿ ಪ್ರಗತಿ ಸಾಧಿಸದ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸುತ್ತಾ , ಇರುವ ತಾಂತ್ರಿಕ ಹಾಗೂ ಆರ್ಥಿಕ ತೊಂದರೆಗಳ ಪರಿಹಾರಕ್ಕೆ ಶೀಘ್ರವಾಗಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಆ ಮೂಲಕ ಅವಳಿ ನಗರದ ಜನತೆಗೆ ನೀರಿನ ಸಮರ್ಪಕ ಪೂರೈಕೆ ಸಾಧ್ಯವಾಗಲಿದೆ ಎಂದರು. ಅಂಧ ಅನಾಥರ ಬಾಳಿನಲ್ಲಿ ನಿರಂತರ ಜ್ಯೋತಿಯಾಗಿ ಬೆಳಗುತ್ತಿರುವ ನಗರದ ಲಿಂ. ಪಂಡಿತ ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನದ ಎಲ್ಲ ಹಂತದ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಇದಕ್ಕೆ ಅಗತ್ಯವಿರುವ ಪರಿಷ್ಕೃತ ಅಂದಾಜು ಪಟ್ಟಿಯನ್ನು ಇಂದೇ ತಯಾರಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸಚಿವರು ಲೋಕೋಪಯೋಗಿ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಆದೇಶಿಸಿದರು.

ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಪೌರಕಾರ್ಮಿಕರ ಹುದ್ದೆಗಳು ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ಸಂಖ್ಯೆ ಮತ್ತು ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ವಿವರಗಳನ್ನು ಸಲ್ಲಿಸಬೇಕು. ಜೊತೆಗೆ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ನಗರಸಭೆ ಅಧಿಕಾರಿಗಳಿಗೆ ಇದೇ ಸಂದರ್ಭದಲ್ಲಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು. ಸಭೆಯಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಕ್ಷತೀಯ ಸಮಾಜದವರು ಶೈಕ್ಷಣಿಕವಾಗಿ ಮುಂದುವರೆಯಬೇಕು

ಇದರಿಂದ ಎಲ್ಲ ರಂಗಗಳಲ್ಲಿಯೂ ಮುಂದುವರೆಯಲು ಸಾಧ್ಯವಿದೆ

ಮುದ್ದೇಬಿಹಾಳ : ಭಾರತ ಇತಿಹಾಸದಲ್ಲಿಯೇ ಕ್ಷತೀಯರು ಪ್ರಮುಖ ಪಾತ್ರವನ್ನು ವಹಿಸಿದ್ದಾರೆ ಕ್ಷತ್ರಿಯ ಸಮಾಜದ ಅನೇಕ ರಾಜರುಗಳು ಈ ದೇಶವನ್ನು ಆಳ್ವಿಕೆ ಮಾಡಿದ್ದಾರೆ ಅಂದಿನ ರಾಜರು ಕೇವಲ ರಾಜಭಾರಕ್ಕಾಗಿ ಹೋರಾಡದೇ ಎಲ್ಲ ಜನರನ್ನು ರಕ್ಷಿಸುವದರೊಂದಿಗೆ ನಮ್ಮ ದೇಶದ ಪರಂಪರೆಯನ್ನು ಉಳಿಸುವಲ್ಲಿ ಅವರು ವಹಿಸಿದ ಪ್ರಮುಖ ಪಾತ್ರ ಇಂದಿನವರೆಗೂ ಅವರ ಹೆಸರುಗಳು ಚಿರಸ್ಮರಣೀಯವಾಗಿ ಉಳಿಯಲು ಕಾರಣವಾಗಿದೆ ಕರ್ನಾಟಕ ಕ್ಷತ್ರೀಯ ಒಕ್ಕೂಟದ ತಾಲೂಕಾಧ್ಯಕ್ಷ ಯಶವಂತ ಕಲಾಲ,ಜಂಟಿಯಾಗಿ ಚಂದ್ರು ಕಲಾಲ್ ಅವರು ಹೇಳಿದರು.

ಇತ್ತೀಚೆಗೆ ಕತೀಯ ಸಮಾಜದ ವೇದಿಕೆಯಲ್ಲಿ ನಡೆದ 2025-27 ನೇ ಅವಧಿಗೆ ತಾಲೂಕು ಸೂರ್ಯವಂಶ ಕ್ಷತ್ರೀಯ ಕಲಾಲ ಸಮಾಜದ ನೂತನ ಪದಾಧಿಕಾರಿಗಳ ಆಯ್ಕೆಯ ಸಂದರ್ಭದಲ್ಲಿ ಮಾತನಾಡುತ್ತಿದ್ದ ಕ್ಷತ್ರೀಯ ಸಮಾಜದವರು ಎಲ್ಲ ಸಮಾಜಬಾಂದವರೊಂದಿಗೆ ಉತ್ತಮ ಬಾಂದವ್ಯ ಮತ್ತು ಸಂಬಂದಗಳನ್ನು ಹೊಂದುವುದರ ಮೂಲಕ ಸಮಾಜವನ್ನು ರಕ್ಷಿಸುವ ಕೆಲಸವನ್ನು ಸಹ ಮಾಡಿದ್ದಾರೆ ಅಂತಹ ವಂಶದಲ್ಲಿ ಜನ್ಮತಾಳಿದ ನಾವುಗಳು ಅವುಗಳನ್ನು ಉಳಿಸಿ ಬೆಳೆಸುವಂತಹ ಕಾರ್ಯ ಮಾಡಬೇಕೆಂದ ಅವರು ಇಡೀ ನಮ್ಮ ಭಾರತ ದೇಶದ ಇತಿಹಾಸದಲ್ಲಿಯೇ ಕ್ಷತ್ರಿಯರು ಗೌರವ ಮತ್ತು ಅಧಿಕಾರದ ಸ್ಥಾನವನ್ನು ಹೊಂದಿದ್ದಾರೆ ಅಂತಹ ಧರ್ಮದಲ್ಲಿ ಹುಟ್ಟಿದಂತಹ ನಾವುಗಳು ಸಮಾಜದ ಅಭಿವೃದ್ಧಿಗಾಗಿ ಹಾಗೂ ಇತರ ಸಮಾಜಗಳೊಂದಿಗೆ ಉತ್ತಮವಾದಂತಹ ಸಂಬಂದಗಳನ್ನು ಹೊಂದುವ ಮೂಲಕ ನಮ್ಮ ಸಮಾಜದ ಘನತೆ ಗೌರವಗಳನ್ನು ಉಳಿಸಿಕೊಳ್ಳುವಂತಹ ಕಾರ್ಯಗಳನ್ನು ನಾವೆಲ್ಲರೂ ಮಾಡೋಣವೆಂದು ಹೇಳಿದರು. ಇನ್ನೋರ್ವ ತಾಲೂಕು ಸೂರ್ಯವಂಶ ಕ್ಷತ್ರೀಯ ಕಲಾಲ ಸಮಾಜದ ನೂತನ ಅಧ್ಯಕ್ಷ ಸುರೇಶ ಕಲಾಲ(ಚಂದುಕರ) ಅವರು ಮಾತನಾಡಿ ಕ್ಷತೀಯ ಸಮಾಜದವರು ಶೈಕ್ಷಣಿಕವಾಗಿ ಮುಂದುವರೆಯಬೇಕು ಇದರಿಂದ ಎಲ್ಲ ರಂಗಗಳಲ್ಲಿಯೂ ಮುಂದುವರೆಯಲು ಸಾಧ್ಯವಿದೆ ಮಕ್ಕಳಿಗೆ ಸ್ವಂತ ಉದ್ಯೋಗದ ಜೊತೆಗೆ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಬೇಕು ಎಂದು ಹೇಳಿದರಲ್ಲದೇ ಎಲ್ಲರ ಸಹಕಾರದಿಂದ ಈ ಸಮಾಜದ ಅಭಿವೃದ್ಧಿಗೆ ಶ್ರಮಿಸುವಂತಹ ಕೆಲಸವನ್ನು ಮಾಡುವದರ ಜೊತೆಗೆ ಎಲ್ಲರೊಂದಿಗೂ ಪ್ರೀತಿ,ವಿಶ್ವಾಸದಿಂದ ಇದ್ದು ನಮ್ಮ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಸಮಾಜದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರನ್ನಾಗಿ ಸುರೇಶ ಕಲಾಲ(ಚಂದುಕರ), ಉಪಾಧ್ಯಕ್ಷರನ್ನಾಗಿ ಗೋಪಾಲ ಕಲಾಲ(ಟಿಂಗರಿಕರ), ಪ್ರ ಕಾರ್ಯದರ್ಶಿಯನ್ನಾಗಿ ಪರಶುರಾಮ ಕಲಾಲ(ಚಂದುಕರ), ಖಜಾಂಚಿಯನ್ನಾಗಿ ಸಂಜು ಸತಾರಕರ, ಹಾಗೂ ಸದಸ್ಯರನ್ನಾಗಿ ಬಸವರಾಜ ಟಿಂಗರಿಕರ, ಮಂಜುನಾಥ ಕಾಂಬಳೆಕರ, ಸಚೀನ ತೊರಲೆಕರು, ಗಂಗಾಧರ ಟಿಂಗರಿಕರ, ಶ್ರೀನಿವಾಸ ಟಿಂಗರಿಕರ, ಅರುಣ ನಗರಕರ, ಚಂದ್ರು ಕಲಾಲ, ಮಾರುತಿ ಪ್ರಭುಕರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಮಯದಲ್ಲಿ ನೂತನವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ದಿವಂಗತ ಚನ್ನಪ್ಪ ಕಂಠಿ ಅವರ ಅಗಲಿಕೆಗೆ ಪುರಸಭೆ ಸಭಾ ಭವನದಲ್ಲಿ ಶ್ರದ್ಧಾಂಜಲಿ

ಮುದ್ದೇಬಿಹಾಳ ; ಪುರಸಭೆಯ ಸದಸ್ಯರು ವೀರಶೈವ ಲಿಂಗಾಯತ ಸಮಾಜದ ಹಿರಿಯರಾದ ದಿ.ಚನ್ನಪ್ಪ ಕಂಠಿ ಅವರ ಅಗಲಿಕೆಗೆ ಪುರಸಭೆ ಸಭಾ ಭವನದಲ್ಲಿ ಸೋಮುವಾರ ಶ್ರದ್ಧಾಂಜಲಿ ಸಲ್ಲಿಸಲಾಯಿತು

ಚನ್ನಪ್ಪ ಕಂಠಿ ಅವರ ಭಾವಚಿತ್ರಕ್ಕೆ ಪೂಜೆಯನ್ನು ಮಾಡಿ ಪುಷ್ಪಾರ್ಚನೆಯನ್ನು ಸಲ್ಲಿಸಲಾಯಿತು

ಈ ವೇಳೆ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ನಾಮನಿರ್ದೇಶಿತ ಸದಸ್ಯ ಗೋಪಿ ಮಡಿವಾಳರ, ಹರೀಶ ಬೇವೂರ, ಸದಸ್ಯರಾದ ಪ್ರತಿಭಾ ಅಂಗಡಗೇರಿ, ಸಂಗಮ್ಮ ದೇವರಳ್ಳಿ, ಸಹನಾ ಬಡಿಗೇರ ದಿ.ಚನ್ನಪ್ಪ ಕಂಠಿ ಅವರ ವ್ಯಕ್ತಿತ್ವ ಕುರಿತು ನುಡಿ ನಮನ ಸಲ್ಲಿಸಿದರು

ಈ ವೇಳೆ ಸದಸ್ಯರಾದ ಶಹಜಾದಬಿ ಹುಣಚಗಿ, ಶಾಂತಾಬಾಯಿ ಪೂಜಾರಿ,ಭಾರತಿ ಪಾಟೀಲ್,ಶಿವು ಶಿವಪೂರ, ಸಂತೋಷ ನಾಯ್ಕೋಡಿ,ಲಲಿತಾ ಇಲಕಲ್, ಬಪ್ಪು ಹುಣಚಗಿ, ಅಶೋಕ ವನಹಳ್ಳಿ ಹಾಗೂ ಪುರಸಭೆ ಸಿಬ್ಬಂದಿಗಳು ಭಾಗವಹಿಸಿದ್ದರು

ನಾಡಪ್ರಭು ಕೆಂಪೇಗೌಡರ ಜಯಂತಿ

ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳ ಆಯೋಜನೆ

ಧಾರವಾಡ : ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ಜಿಲ್ಲೆಯ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲಾ ಕಾಲೇಜುಗಳಲ್ಲಿ ನಾಡಪ್ರಭು ಕೆಂಪೇಗೌಡರ ಜೀವನ ಸಾಧನೆ ಕುರಿತು ವಿವಿಧ ಸ್ಪರ್ಧಾ ಕಾರ್ಯಕ್ರಮಗಳನ್ನು ಆಯೋಜಿಸಲು ಬೃಹತ ಬೆಂಗಳೂರು ಮಹಾನಗರ ಪಾಲಿಕೆಯಿಂದ ಜಿಲ್ಲೆಯ ಎಲ್ಲ ತಾಲೂಕುಗಳಿಗೆ ಅನುದಾನ ಬಿಡುಗಡೆಯಾಗಿದೆ.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ರಸಪ್ರಶ್ನೆ, ಪ್ರಬಂಧ ಸ್ಪರ್ಧೆ, ಆಶುಭಾಷಣ, ಕವನವಾಚನ, ಗಾಯನ ಮತ್ತು ಚಿತ್ರಕಲಾ ವಿಷಯಗಳಲ್ಲಿ ನಾಲ್ಕು ಸ್ಪರ್ಧೆಗಳನ್ನು ಆಯ್ಕೆ ಮಾಡಿಕೊಂಡು, ಏರ್ಪಡಿಸಬೇಕು. ಸ್ಪರ್ಧೆಗಳನ್ನು ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಆಯೋಜಿಸಲು ಆದ್ಯತೆ ನೀಡಬೇಕು. ಪ್ರತಿ ಸ್ಪರ್ಧೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಹಾಗೂ ಎಲ್ಲ ಸಮುದಾಯದ ವಿದ್ಯಾರ್ಥಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕು.

ಈ ಸ್ಪರ್ಧಾ ಕಾರ್ಯಕ್ರಮಗಳ ಆಯೋಜನೆಗಾಗಿ ಪ್ರತಿ ತಾಲೂಕಿಗೆ ಪ್ರತ್ಯೇಕವಾದ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಕಾಲಮಿತಿಯಲ್ಲಿ ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ನಾಡಪ್ರಭು ಕೆಂಪೇಗೌಡರ ಜೀವನ ಸಾಧನೆಗಳನ್ನು ಮನವರಿಕೆ ಮಾಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ತಿಳಿಸಿದ್ದಾರೆ.

****

ಗೋಣಿಬಸವೇಶ್ವರ -ಚಂದ್ರವ್ವತಾಯಿ ದೇವಸ್ಥಾನಗಳ ತಡೆಗೋಡೆ ನಿರ್ಮಾಣ ಕಾಮಗಾರಿಗೆ ಚಾಲನೆ

ರಾಯಬಾಗ: ಮತಕ್ಷೇತ್ರದ ಎಲ್ಲ ಗ್ರಾಮಗಳಿಗೆ ರಸ್ತೆ, ನೀರು, ಚರಂಡಿ, ಬಿದಿದೀಪ, ಆಸ್ಪತ್ರೆಗಳನ್ನು ಸುಧಾರಿಸುವುದರ ಮೂಲಕ ಎಲ್ಲ ಮೂಲಭೂತ ಸೌಕರ್ಯ ಕಲ್ಪಿಸಲಾಗುತ್ತಿದೆ ಎಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು. ಸೋಮವಾರ ತಾಲೂಕಿನ ಕಂಕಣವಾಡಿ ಪಟ್ಟಣದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಮಂಜೂರಾದ 2.50 ಕೋಟಿ ರೂ. ಅನುದಾನದಲ್ಲಿ ಕಂಕಣವಾಡಿ-ರಾಯಬಾಗ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಜಿ.ಪಂ. ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ 20 ಲಕ್ಷ ರೂ.ಅನುದಾನದಲ್ಲಿ ಗೋಣಿಬಸವೇಶ್ವರ ಮತ್ತು ಚಂದ್ರವ್ವತಾಯಿ ದೇವಸ್ಥಾನಗಳ ತಡೆಗೋಡೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕ್ಷೇತ್ರ ಎಲ್ಲ ಪ್ರಮುಖ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸಲಾಗುತ್ತಿದೆ ಮತ್ತು ಎಲ್ಲ ಸಮಾಜದವರ ದೇವಸ್ಥಾನಗಳ ಅಭಿವೃದ್ಧಿಗಾಗಿ ಅನುದಾನ ನೀಡುತ್ತಿರುವುದಾಗಿ ತಿಳಿಸಿದರು.

ಜಿ.ಪಂ.ಎಇ ಎಸ್.ಎಸ್.ಹೊಸಮನಿ, ಪ್ರಕಾಶ ಹುಕ್ಕೇರಿ, ರಾಜಶೇಖರ ಖನದಾಳೆ, ಅಪ್ಪಾಸಾಬ ಬ್ಯಾಕೂಡೆ, ನಟರಾಜ ಮಾವರಕರ, ಕೆ.ಬಿ.ದೇಸಾಯಿ, ಹಾಲಪ್ಪ ಪಿರಗಿಪಾಟೀಲ, ಭೀಮಪ್ಪ ನಾಯಿಕವಾಡಿ, ಮಹಾಲಿಂಗ ಮುದ್ದಾಪೂರೆ, ಪುಂಡಲೀಕ ಗಿಡ್ಡಗೋಳ, ಮಾರುತಿ ಜಂಬಗಿ, ಕಲ್ಲನಗೌಡ ಪಾಟೀಲ, ಸಿದ್ರಾಮ ಪಾಟೀಲ, ರಾಮನಾಯಕ ನಾಯಿಕ, ಅಪ್ಪಣ್ಣ ಗಡಕರಿ, ಬಸವಂತ ಅಂಬಿನಾಯಕ, ಚಂದವ್ವ ಸಂಗಯ್ಯಗೋಳ ಸೇರಿ ಅನೇಕರು ಇದ್ದರು.

ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರಿಂದ ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಗರಗ, ತಡಕೋಡ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಭೇಟಿ, ಪ್ರಗತಿ ಪರಿಶೀಲನೆ

ಧಾರವಾಡ : ಧಾರವಾಡ ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರು ನಿನ್ನೆ (ಜೂ.23) ಮಧ್ಯಾಹ್ನದಿಂದ ಸಂಜೆಯವರೆಗೆ ಧಾರವಾಡ ತಾಲೂಕಿನ ವಿವಿಧ ಗ್ರಾಮಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಭೇಟಿ ನೀಡಿ, ಕಾರ್ಯನಿರ್ವಹಣೆಯ ಕುರಿತು ಪರಿಶೀಲಿಸಿದರು.

ಧಾರವಾಡ ತಾಲ್ಲೂಕಿನ ಮುಮ್ಮಿಗಟ್ಟಿ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಸರ್ಕಾರಿ ಪ್ರೌಢಶಾಲೆ ನೂತನ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿ, ಮಂಜೂರಾತಿ ನೀಡಿದ ನೀಲ ನಕ್ಷೆಯ ಪ್ರಕಾರ ಹಾಗೂ ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಪ್ರಗತಿ ಸಾಧಿಸಿರುವ ಕುರಿತು ಮಾಹಿತಿ ಪಡೆದುಕೊಂಡರು.

ನಂತರ ಅವರು ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ, ಮಕ್ಕಳ ಹಾಜರಾತಿ, ಆಹಾರ ದಾಖಲೆಗಳನ್ನು ಪರಿಶೀಲನೆ ಮಾಡಿದರು. ಮಕ್ಕಳಿಗೆ ನೀಡುವ ಆಹಾರ ಸಾಮಗ್ರಿಗಳನ್ನು ಪರೀಕ್ಷಿಸಿದರು. ಅಂಗನವಾಡಿಯನ್ನು ಸ್ವಚ್ಛತೆಯಿಂದ ಇಟ್ಟುಕೊಳ್ಳಬೇಕು. ಹಾಗೂ ಆಹಾರ ಸಾಮಗ್ರಿಗಳನ್ನು ಪರೀಕ್ಷಿಸಿ, ಯಾವುದೇ ಹುಳು, ಕಡ್ಡಿ ಇರದಂತೆ ನೋಡಿ ಮಕ್ಕಳಿಗೆ ನೀಡಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಸುರಕ್ಷತೆಯ ಕ್ರಮಗಳನ್ನ

ಮಣ್ಣೆತ್ತಿನ ಅಮವಾಸ್ಯೆ ಪ್ರಯುಕ್ತ ಪಿಓಪಿ ಎತ್ತುಗಳ ಮಾರಾಟ ಭರಾಟೆ

ಬಸವನಬಾಗೇವಾಡಿ, : ಉತ್ತರ ಕರ್ನಾಟಕದಲ್ಲಿ ರೈತ ಬಾಂಧವರು ಕೃಷಿಗೆ ಹಾಗೂ ಜಾನುವಾರುಗಳಿಗೆ ಸಂಬಂಧಿಸಿದಂತೆ ಹಲವು ಹಬ್ಬಗಳನ್ನು ಆಚರಿಸುತ್ತಾ ಬಂದಿದ್ದಾರೆ. ಅವುಗಳಲ್ಲಿ ಕಾರಹುಣ್ಣಿಮೆ ನಂತರ ಬರುವ ಮಣ್ಣೆತ್ತಿನ ಅಮವಾಸ್ಯೆಯು ಪ್ರಮುಖವಾಗಿದೆ. ಈ ವರ್ಷದ ಮಣ್ಣೆತ್ತಿನ ಅಮವಾಸ್ಯೆಯು ಜೂ.25 ರಂದು ಆಚರಿಸಲ್ಪಡುತ್ತಿದೆ.

ಎತ್ತು ಮತ್ತು ಮಣ್ಣನ್ನು ಪೂಜಿಸಿದರೆ ಮಳೆ–ಬೆಳೆಗಳು ಚೆನ್ನಾಗಿ ಬರುತ್ತವೆ ಎಂಬ ನಂಬಿಕೆ ರೈತರ ಬಾಂಧವರಲ್ಲಿ ಹಿಂದಿನಿಂದಲೂ ಇದೆ. ಇಂದಿನ ಆಧುನಿಕತೆ ಸ್ಪರ್ಧದಿಂದಾಗಿ ಮಣ್ಣೆತ್ತಿನ ಬದಲಾಗಿ ಮಾರುಕಟ್ಟೆಯಲ್ಲಿ ಹೆಚ್ಚಾಗಿ ಪ್ಯಾರಿಸ್ ಆಫ್ ಪ್ಲಾಸ್ಟರ್‌ನಿಂದ ತಯಾರಿಸಿದ ಎತ್ತುಗಳ ಮಾರಾಟದ ಭರಾಟೆ ಕಂಡುಬರುತ್ತಿದೆ. ಮುಂಬರುವ ದಿನಗಳಲ್ಲಿ ಮಣ್ಣೆತ್ತಿನ ಅಮವಾಸ್ಯೆ ದಿನ ಮಣ್ಣೆತ್ತು ಕಾಣಸಿಗುವದಿಲ್ಲವೇನೋ ಎಂಬ ಆತಂಕ ವ್ಯಕ್ತವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಮಣ್ಣೆತ್ತು ಜೊತೆಗೆ ಮಾರುಕಟ್ಟೆಯಲ್ಲಿ ಕಲಬುರಗಿಯ ಉಮರ್ಗಾದಲ್ಲಿ ತಯಾರಾದ ಪ್ಯಾರಿಸ್ ಆಪ್ ಪ್ಲಾಸ್ಟರ್‌ನ ಬಣ್ಣ ಬಣ್ಣದ ಎತ್ತುಗಳು ಮಂಗಳವಾರ ಮಾರಾಟ ಮಾಡುವದು ಕಂಡು ಬಂದಿತ್ತು. ಇದರ ಜೊತೆಗೆ ಕಟ್ಟಗೆಯಿಂದ ತಯಾರಿಸಿದ ಅಲಂಕಾರಿಕ ಚಕ್ಕಡಿ ಸಹ ಮಾರಾಟ ಆಗುತ್ತಿರುವದು ಕಂಡುಬಂದಿತ್ತು.

ಮಣ್ಣೆತ್ತಿನ ಅಮವಾಸ್ಯೆ ದಿನದಂದು ಪೂಜೆಗೆ ಅಗತ್ಯವಿರುವ ಮಣ್ಣೆತ್ತುಗಳನ್ನು ವಿತರಣೆ ಮಾಡುವದಕ್ಕಾಗಿ ಪಟ್ಟಣದ ಕುಂಬಾರರ ಮನೆಗಳಲ್ಲಿ ಎತ್ತುಗಳ ತಯಾರಿಕೆಗೆ ಬೇಕಾದ ಮಣ್ಣು ಸೇರಿದಂತೆ ಇತರ ವಸ್ತುಗಳನ್ನು ಸಂಗ್ರಹಿಸಿಕೊಂಡು ಕಳೆದ ಹದಿನೈದು ದಿನಗಳಿಂದ ಕುಟುಂಬ ಸದಸ್ಯರೊಂದಿಗೆ ಮಣ್ಣೆತ್ತು ತಯಾರಿಕೆಯಲ್ಲಿ ತಲ್ಲೀನರಾಗುತ್ತಿರುವದು ಕಡಿಮೆಯಾಗುತ್ತಿರುವದು ಕಂಡುಬರುತ್ತಿದೆ.

ಮುಂಗಾರು ಮಳೆಯೊಂದಿಗೆ ಆರಂಭವಾಗುವ ಹಬ್ಬಗಳ ಆಚರಣೆಯೊಂದಿಗೆ ಕೃಷಿ ಚಟುವಟಿಕೆಯಲ್ಲಿ ನಿರತರಾಗುವ ರೈತ ಕುಟುಂಬದವರು ಸಂಪ್ರದಾಯದಂತೆ ಮಣ್ಣೆತ್ತಿನ ಹಬ್ಬವನ್ನು ಉತ್ಸಾಹದಿಂದ ಆಚರಣೆ ಮಾಡುತ್ತಾರೆ. ಈ ವರ್ಷ ಮುಂಗಾರು ಆರಂಭದ ಮುನ್ನವೇ ಮಳೆ ಆಗಮಿಸಿದ್ದರಿಂದಾಗಿ ರೈತ ಬಾಂಧವರು ಹರ್ಷಗೊಂಡಿದ್ದಾರೆ. ಉತ್ತಮ ಮಳೆಯಾಗಿದ್ದರಿಂದ ಈಗಾಗಲೇ ಬಿತ್ತನೆ ಕಾರ್ಯ ಮಾಡಿದ್ದಾರೆ. ಬಿತ್ತನೆಯಾದ ನಂತರ ಅಲ್ಪಸ್ವಲ್ಪ ಮಳೆಯಾಗಿದೆ. ಇನ್ನಷ್ಟು ಮಳೆಯಾದರೆ ಬಿತ್ತನೆ ಮಾಡಿರುವದಕ್ಕೆ ತುಂಬಾ ಅನುಕೂಲವಾಗುತ್ತದೆ ಎಂದು ರೈತ ಬಾಂಧವರು ಹೇಳುತ್ತಾರೆ.

ಅಮವಾಸ್ಯೆ ದಿನದಂದು ಜನತೆ ಕುಂಬಾರರ ಮನೆಗೆ ತೆರಳಿ ಮಣ್ಣೆತ್ತುಗಳನ್ನು ತಂದು ದೇವರ ಜಗುಲಿಯ ಮೇಲಿಟ್ಟು ಕುಟುಂಬ ಸದಸ್ಯರೊಂದಿಗೆ ಸಾಮೂಹಿಕ ಪೂಜೆ ಸಲ್ಲಿಸುವ ಸಂಪ್ರದಾಯ ಕಡಿಮೆಯಾಗುತ್ತಿದೆ. ಮಾರುಕಟ್ಟೆಯಲ್ಲಿ ಸಿಗುವ ಮಣ್ಣೆತ್ತುಗಳನ್ನು ಖರೀದಿಸಿ ತಂದು ಪೂಜೆ ಮಾಡುವದು ಕಂಡುಬರುತ್ತಿದೆ.

ಪಟ್ಟಣದ ಸೇರಿದಂತೆ ತಾಲೂಕಿನಲ್ಲಿ ಸಾರ್ವಜನಿಕ ಸ್ಥಳದಲ್ಲಿಯೂ ದೊಡ್ಡದಾದ ಮಣ್ಣೆತ್ತುಗಳನ್ನು ಪ್ರತಿಷ್ಠಾಪನೆ ಮಾಡಿ ಐದು ದಿನಗಳವರೆಗೆ ಪೂಜೆ ಸಲ್ಲಿಸುತ್ತಾರೆ. ನಂತರ ಊರ ಮುಂದಿನ ಕೆರೆ, ಹಳ್ಳ ಬಾವಿಯಲ್ಲಿ ಮಣ್ಣೆತ್ತುಗಳನ್ನು ವಿಸರ್ಜನೆ ಕಾರ್ಯ ಸಂಭ್ರಮದಿಂದ ಮಾಡುವದು ಸಂಪ್ರದಾಯ.ಪಟ್ಟಣದ ಬಸವಜನ್ಮ ಸ್ಮಾರಕದ ರಸ್ತೆಯಲ್ಲಿರುವ ಪಲ್ಲೆಕಟ್ಟೆಯಲ್ಲಿ ಮಂಗಳವಾರ ಬೆಳಗ್ಗೆ ಗಂಗೂಬಾಯಿ ದರ್ಶನಕರ ಅವರು ಮಣ್ಣಿನಿಂದ ತಯಾರಿಸಿದ ಅಲಂಕಾರಿಕ ಮಣ್ಣೆತ್ತುಗಳನ್ನು ಮಾರಾಟ ಮಾಡುತ್ತಿರುವದು ಕಂಡುಬಂದಿತ್ತು. ಪ್ರತಿ ಜೋಡಿಗೆ ರೂ.180 ದರ ಹೇಳುವದು ಕಂಡುಬಂದಿತ್ತು.

ಪಟ್ಟಣದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾರಿವಾಳ ಅವರನ್ನು ಮಾತನಾಡಿಸಿದಾಗ ಮೊದಲು ಪಟ್ಟಣದಲ್ಲಿ ಹಿರಿಯರಾದ ಸಾಯಬಣ್ಣ ಕುಂಬಾರ, ಪರ್ವತಪ್ಪ ಕುಂಬಾರ ಅವರು ಕಾರಹುಣ್ಣಿಮೆ ಮರುದಿನದಿಂದಲೇ ಮಣ್ಣೆತ್ತಿನ ಅಮವಾಸ್ಯೆಗೆ ಬೇಕಾದ ಮಣ್ಣೆತ್ತುಗಳನ್ನು ತಯಾರಿ ಮಾಡುವಲ್ಲಿ ತಮ್ಮನ್ನು ತೊಡಗಿಸಿಕೊಳ್ಳುತ್ತಿದ್ದರು. ಮಣ್ಣೆತ್ತಿನ ಅಮವಾಸ್ಯೆ ದಿನ ರೈತ ಬಾಂಧವರ ಮನೆಗಳಿಗೆ ವಿತರಣೆ ಮಾಡಿ ಜೋಳ ಇಲ್ಲವೇ ಹಣ ಸಂಗ್ರಹಿಸುತ್ತಿದ್ದರು. ಇದೀಗ ಈ ಇಬ್ಬರು ವ್ಯಕ್ತಿಗಳು ಮೃತರಾಗಿದ್ದಾರೆ. ಇದೀಗ ಕುಂಬಾರ ಮನೆಗಳಲ್ಲಿ ಮಣ್ಣೆತ್ತು ತಯಾರಿಸುವುದು ಕಡಿಮೆಯಾಗುತ್ತಿರುವುದು ವಿಷಾದಕರ ಸಂಗತಿ. ಅಮವಾಸ್ಯೆ ದಿನ ನಮ್ಮ ಮನೆಗೆ ಮೊದಲಿನಂತೆ ಯಾರೂ ಮಣ್ಣೆತ್ತುಗಳನ್ನು ಕೊಡದೇ ಇರುವದರಿಂದಾಗಿ ನಾನೇ ಮನೆಯಲ್ಲಿ ಮಣ್ಣಿನಿಂದ ಎತ್ತುಗಳನ್ನು ಮಾಡಿ ಸಂಪ್ರದಾಯದಂತೆ ಪೂಜೆ ಮಾಡಲಾಗುತ್ತಿದೆ. ಮಾರುಕಟ್ಟೆಯಲ್ಲಿ ಬಣ್ಣ ಬಣ್ಣದ ಎತ್ತುಗಳ ಮಾರಾಟವಾಗುತ್ತಿರುವದು ಕಂಡುಬರುತ್ತಿದೆ. ಈ ವರ್ಷ ಉತ್ತಮ ಮಳೆಯಾಗಿರುವದರಿಂದಾಗಿ ಈಗಾಗಲೇ ಬಿತ್ತನೆ ಮಾಡಲಾಗಿದೆ. ಮುಂಬರುವ ದಿನಗಳಲ್ಲಿ ಮತ್ತಷ್ಟು ಮಳೆಯಾದರೆ ಬಿತ್ತನೆ ಮಾಡಿರುವುದಕ್ಕೆ ತುಂಬಾ ಅನುಕೂಲವಾಗಿ ಉತ್ತಮ ಬೆಳೆ ಬರುತ್ತದೆ ಎಂದರು.

ಮುಖಂಡ ಜಟ್ಟಿಂಗರಾಯ ಮಾಲಗಾರ ಅವರು ಸಂಪ್ರದಾಯದಂತೆ ಮಣ್ಣೆತ್ತಿನ ಅಮವಾಸ್ಯೆ ದಿನ ಮಣ್ಣೆತ್ತು ಪೂಜೆ ಮಾಡುವದು ಇಂದಿನ ಜನಾಂಗಕ್ಕೆ ತಿಳಿಸಿಕೊಡುವ ಅಗತ್ಯವಿದೆ. ಮಣ್ಣೆತ್ತಿನ ಬದಲಾಗಿ ಪಿಓಪಿ ಎತ್ತುಗಳು ಮಾರಾಟಕ್ಕೆ ಬಂದಿರುವದು ಮುಂದಿನ ಜನಾಂಗಕ್ಕೆ ಮಣ್ಣೆತ್ತಿನ ಬಗ್ಗೆ ಅರಿವು ಕಡಿಮೆಯಾಗುವ ಸಾಧ್ಯತೆಯಿದೆ. ಇದು ಕಡಿಮೆಯಾಗಿ ಮಣ್ಣೆತ್ತು ಹೆಚ್ಚು ಮಾರಾಟವಾಗುವದು ತುಂಬಾ ಅಗತ್ಯವಿದೆ. ಇದರ ಬಗ್ಗೆ ಮಕ್ಕಳಿಗೆ ತಿಳಿಸಿಕೊಡುವ ಕಾರ್ಯವಾಗಬೇಕೆಂದರು.

ಮಣ್ಣೆತ್ತಿನ ಅಮವಾಸ್ಯೆದಂಗವಾಗಿ ಜನರ ಬೇಡಿಕೆ ಅನುಗುಣವಾಗಿ ಬಣ್ಣ ಹಚ್ಚಿರುವ (ಪಿಓಪಿ) ಎತ್ತುಗಳನ್ನು ಉಮರ್ಗಾದಿಂದ ಮಾರಾಟಕ್ಕೆ ತರಿಸಲಾಗಿದೆ. ಬೇರೆ ಕಡೆಯಿಂದ ತರಿಸಲಾದ ಪ್ಯಾರಿಸ್ ಆಫ್ ಪ್ಲಾಸ್ಟರ್‌ನಿಂದ ತಯಾರಿಸಿದ ಎತ್ತುಗಳನ್ನು ಗಾತ್ರದ ಅನುಗುಣವಾಗಿ ರೂ.100 ರಿಂದ 2500 ರೂ.ವರೆಗೆ ಮಾರಾಟ ಮಾಡಲಾಗುತ್ತಿದೆ. ನನ್ನ ತಾಯಿ ಮಣ್ಣಿನಿಂದ ತಯಾರಿಸಿದ ಎತ್ತುಗಳನ್ನು ಜೋಡಿಗೆ ರೂ.50 ರಿಂದ 100 ರೂ.ವರೆಗೆ ಮಾರಾಟ ಮಾಡಲಾಗುತ್ತಿದೆ. ಈ ಸಲ ಕಟ್ಟಿಗೆಯಿಂದ ತಯಾರಿಸಿದ ಸುಂದರವಾದ ಚಕ್ಕಡಿಗಳನ್ನು ಮಾರಾಟಕ್ಕೆ ತಂದಿದ್ದೇನೆ ಎಂದು ಗದಿಗೆಪ್ಪ ಕುಂಬಾರ ಹೇಳಿದರು.

***

ಕಲಾವಿದರ ಮಗನ ಶಿಕ್ಷಣ ಸಹಾಯಾರ್ಥ ಜೂ.29 ರಂದು ನಾಟಕ ಪ್ರದರ್ಶನ

ಬಸವನಬಾಗೇವಾಡಿ. : ಪಟ್ಟಣದ ವಿರಕ್ತಮಠದ ಶಿವಾನುಭವ ಮಂಟಪದಲ್ಲಿ ಜೂ. 29 ರಂದು ಸಂಜೆ 6.30 ಗಂಟೆಗೆ ಹಾವೇರಿ ಜಿಲ್ಲೆಯ ಸವಣೂರು ತಾಲೂಕಿನ ಮಾವೂರದ ಗುರು ಬಾಲ ಲೀಲಾ ಸಂಗಮೇಶ್ವರ ನಾಟ್ಯ ಸಂಘದಿಂದ ನಾಟಕ ಕಲಾವಿದರು ಹಿರಿಯ ಕಲಾವಿದ ಶಿವಲಿಂಗಯ್ಯಸ್ವಾಮಿ ಅವರ ಮಗನ ಶಿಕ್ಷಣ ಸಹಾಯರ್ಥವಾಗಿ ಬಂಜೆ ತೊಟ್ಟಿಲು ಎಂಬ ಸುಂದರ ಕೌಟುಂಬಿಕ ನಾಟಕವನ್ನು ಅಭಿನಯಿಸಲಿದ್ದಾರೆ. ಹಿರಿಯ ಕಲಾವಿದ ಶಿವಲಿಂಗಯ್ಯಸ್ವಾಮಿ ಅವರ ಮಗನ ಶಿಕ್ಷಣ–ಕ್ಕೆ ಸಹಾಯ ಮಾಡುವದಕ್ಕಾಗಿ ಜನರು ಈ ನಾಟಕ ಪ್ರದರ್ಶನದ ಸಹಾಯಾರ್ಥ ದೇಣಿಗೆ, ನಾಟಕದ ಪ್ರದರ್ಶನ ಟಿಕೆಟ್‌ಗಳನ್ನು ಖರೀದಿಸುವ ಮೂಲಕ ಅವರಿಗೆ ಸಹಾಯ ಮಾಡಬೇಕೆಂದು ಪ್ರಕಟಣೆ ತಿಳಿಸಿದೆ.

ಬೈಲಹೊಂಗಲದ ಶಾಸಕರ ಮತಕ್ಷೇತ್ರ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ನಂ 4 ರಲ್ಲಿ ಶಾಸಕ ಮಹಾಂತೇಶ ಕೌಜಲಗಿ ಅವರು ಸೋಮವಾರ ವಿಜ್ಞಾನ ಪ್ರಯೋಗಾಲಯ ಕೊಠಡಿಯನ್ನು ಉದ್ಘಾಟಿಸಿ, ವೀಕ್ಷಿಸಿದರು.

ಈ ಸಂಧರ್ಭದಲ್ಲಿ ಬಿಇಓ ಎ. ಎನ್. ಪ್ಯಾಟಿ, ಶಿಕ್ಷಣ ಸಂಯೋಜಕ ಬಿ. ಎನ್. ಕಸಾಳೆ, ಎಸ್ ಡಿಎಂಸಿ ಅಧ್ಯಕ್ಷ ಅರ್ಜುನ್ ಕಲಕುಟಕರ, ಪ್ರಭಾರಿ ಮುಖ್ಯ ಶಿಕ್ಷಕ ಡಿ. ಎನ್. ಹಲಕಿ, ಎಸ್ಡಿಎಂಸಿ ಉಪಾಧ್ಯಕ್ಷ ಗಂಗಮ್ಮ ಸಾಲಿ, ಸದಸ್ಯರಾದ ಮಹಾಂತೇಶ ರಾಜಗೋಳಿ, ಗದಿಗೆಪ್ಪ ಮಡಿವಾಳರ, ಪೂಜಾ ಕೋಟಬಾಗಿ, ಭಾರತಿ ಬಾದಾಮಿ, ಸಂದೀಪ್ ಕುಲಕರ್ಣಿ, ಸಿ. ಎಸ್. ಧರೆಪ್ಪನವರ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾ ಪಿ.ಸಿ &ಪಿ.ಎನ್.ಡಿ.ಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಸಭೆ

ಕಾರವಾರ. ಜಿಲ್ಲಾ ಶಸ್ತ್ರಚಿಕಿತ್ಸಕ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಶಿವಾನಂದ ಕುಡ್ತರಕರ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಿ.ಸಿ &ಪಿ.ಎನ್.ಡಿ.ಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಸಭೆಯು ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯಲ್ಲಿ ನಡೆಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನೀರಜ್ ಮಾತನಾಡಿ, ಜಿಲ್ಲೆಯಲ್ಲಿರುವ ಸ್ಕ್ಯಾನಿಂಗ ಸೆಂಟರ್‌ಗಳಲ್ಲಿ ಗರ್ಭ ಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆಯ ಕುರಿತ ಸೂಚನಾ ಫಲಕಗಳನ್ನು ಮತ್ತು ನಿಯಮ ಉಲ್ಲಂಘನೆಯ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲೆಯ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲನೆ, ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆಯ ಅನುಷ್ಠಾನ, ಹೊಸ ನೋಂದಣಿ ಮತ್ತು ನವೀಕರಣ ಕುರಿತಂತೆ ಸಲ್ಲಿಕೆಯಾದ ಅರ್ಜಿಗಳನ್ನು ಹಾಗೂ ಬಂದಿರುವ ದೂರು ಅರ್ಜಿಗಳ ಕುರಿತು ಚರ್ಚಿಸಿ, ಸಲಹೆ ಪಡೆದು ಪಿ.ಸಿ.ಪಿ.ಎನ್.ಡಿ.ಟಿ ಸಕ್ಷಮ ಪ್ರಾಧಿಕಾರಿಗಳ ಅನುಮೋದನೆ ಕೋರಿ ಕಡತವನ್ನು ಮಂಡಿಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಸಮಿತಿಯ ಸದಸ್ಯರಾದ ಡಾ. ವಿಶ್ವನಾಥ್ ನಾಚಕನೂರು, ಡಾ. ಯುವರಾಜ್ ಪಟವರ್ಧನ್, ಶ್ರೀಕಾಂತ ನಾಯ್ಕ, ರಿತೀಶ್. ಸಿ ನಾಯ್ಕ ಮತ್ತಿತರರು ಉಪಸ್ಥಿತರಿದ್ದರು.

ಕಾರವಾರ : ವಿದ್ಯುತ್ ವ್ಯತ್ಯಯ

ಕಾರವಾರ : ಕಾರವಾರ ಉಪವಿಭಾಗದ ವ್ಯಾಪ್ತಿಯಲ್ಲಿ ತುರ್ತು ಲೈನ್ ನಿರ್ವಹಣೆ ಕೆಲಸವಿರುವುದರಿಂದ ಶಿರವಾಡ ಫೀಡರಿನ ವಿವಿಧ ಭಾಗಗಳಲ್ಲಿ ಜೂ.25 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 3.30 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ಕಾರವಾರ ಹೆಸ್ಕಾಂ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೂ. 28ರಂದು ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಯುಜಿಸಿಇಟಿ 2025ರ ಸಿಟು ಹಂಚಿಕೆ ಮಂಥನ ಕಾರ್ಯಕ್ರಮ

ಕೊಪ್ಪಳ ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ವತಿಯಿಂದ ಯುಜಿಸಿಇಟಿ 2025ರ ಸಿಟು ಹಂಚಿಕೆ ಮಂಥನ ಕಾರ್ಯಕ್ರಮವನ್ನು ಜೂನ್ 28ರಂದು ಬೆಳಿಗ್ಗೆ 9–30 ರಿಂದ ಮಧ್ಯಾಹ್ನ 1–30ರ ವರೆಗೆ ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ.

ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಯುಜಿಸಿಇಟಿ–2025ರ ಕುರಿತು ತಿಳುವಳಿಕೆ ನೀಡಲು ಈ ಕಾರ್ಯಾಗಾರವನ್ನು ವಿಪರ್ಡಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ಪ್ರಾಚಾರ್ಯರು – 8073332764, ವಿಭಾಗಾಧಿಕಾರಿಗಳು 9482402763, 8317465500, 9035963363, 9901781858, 9731232917 ಸಂಪರ್ಕಿಸಬಹುದಾಗಿದೆ ಎಂದು ತಳಕಲ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕುರಿತು ರೈತರಲ್ಲಿ ಮನವಿ

ಧಾರವಾಡ : 2025–26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ಸಮೀಕ್ಷೆ ಆ್ಯಪ್ ಬಿಡುಗಡೆ ಮಾಡಿದ್ದು, ರೈತರು ತಾವು ಬೆಳೆದ ಬೆಳೆಗಳ ಮಾಹಿತಿಯನ್ನು ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ನೊಂದಾಯಿಸಬೇಕು.

ಸರಕಾರದ ವಿವಿಧ ಯೋಜನೆಗಳಾದ ಫಸಲ ಭೀಮಾ ಯೋಜನೆ, ಬೆಳೆ ಪರಿಹಾರ, ಬೆಂಬಲ ಬೆಲೆ ಯೋಜನೆಳ ಸೌಲಭ್ಯವನ್ನು ಪಡೆಯಲು ಬೆಳೆ ಸಮೀಕ್ಷೆ ಮಾಡುವುದು ಅವಶ್ಯಕವಾಗಿರುತ್ತದೆ. ಬೆಳೆ ವಿಮೆ ಮಾಡಿಸಿದ ರೈತರು ಕಡ್ಡಾಯವಾಗಿ ತಾವು ಬೆಳೆದ ಬೆಳೆಯನ್ನು ಬೆಳೆ ಸಮೀಕ್ಷೆಯಡಿ ನೋಂದಾಯಿಸಬೇಕು. ಬೆಳೆ ಸಮೀಕ್ಷೆ ಆ್ಯಪ್‌ನ್ನು ಗೂಗಲ್ ಪ್ಲೇಸ್ಟೋರ್‌ನಲ್ಲಿ ಲಭ್ಯವಿದ್ದು, ಮುಂಗಾರು ರೈತರ ಬೆಳೆ ಸಮೀಕ್ಷೆ 2025 ಎಂದು ಟೈಪ್ ಮಾಡಿ ಆ್ಯಪ್ ಡೌನ್ಲೋಡ್ ಮಾಡುವ ಮೂಲಕ ಬೆಳೆ ಸಮೀಕ್ಷೆ ಮಾಡಬಹುದು ಹಾಗೂ ಖಾಸಗಿ ನಿವಾಸಿಗಳನ್ನು ಸಂಪರ್ಕಿಸಿ ಖಾಸಗಿ ನಿವಾಸಿ ಬೆಳೆ ಆ್ಯಪ್ ಮೂಲಕವು ಬೆಳೆ ಸಮೀಕ್ಷೆಯನ್ನು ಮಾಡಿಸಬಹುದು ಎಂದು ಧಾರವಾಡ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕ ರಾಜಶೇಖರ ಅಣಗೌಡರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುದ್ರಾ ಯೋಜನೆಯಡಿ ಅಸಂಘಟಿತ ಕೈಮಗ್ಗ ನೇಕಾರರಿಗೆ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ : 2025–26 ನೇ ಮುದ್ರಾ ಯೋಜನೆಯಡಿ ಕೈಮಗ್ಗ ನೇಕಾರಿಕೆಯಲ್ಲಿ ತೊಡಗಿರುವ ಅಸಂಘಟಿತ ಕೈಮಗ್ಗ ನೇಕಾರರು ತಮ್ಮ ನೇಕಾರಿಕೆಯ ಉದ್ಯೋಗಕ್ಕಾಗಿ ರಾಷ್ಟ್ರೀಕೃತ, ವಾಣಿಜ್ಯ ಬ್ಯಾಂಕುಗಳಿಂದ ರಿಯಾಯಿತಿ ಬಡ್ಡಿ ದರದಲ್ಲಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಸಂಘಟಿತ ಕೈಮಗ್ಗ ನೇಕಾರರು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಅಥವಾ ಬ್ಯಾಂಕಗಳಿಂದ ಅರ್ಜಿ ನಮೂನೆ ಪಡೆದು, ಜುಲೈ 15, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 0836– 2448834 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ವಿದ್ಯಾ ಸಂಸ್ಥೆಯಲ್ಲಿ ಯೋಗ ದಿನಾಚರಣೆ ಆಚರಣೆ

ತಾಳಿಕೋಟೆ, ಪಟ್ಟಣದ ಶ್ರೀ ಎಸ್. ಎಸ್.ವಿದ್ಯಾಸಂಸ್ಥೆಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಎಚ್. ಎಸ್.ಪಾಟೀಲ, ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶಿವಕುಮಾರ ನಾಯಕ, ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಎಮ್. ಎಸ್.ರಾಯಗೊಂಡ, ಪಾಲ್ಗೊಂಡು ಯೋಗದಿಂದ ಮನುಷ್ಯನ ದೇಹದಲ್ಲಿ ಸರ್ವರೋಗಗಳಿಗೆ ಮುಕ್ತಿ ಸಿಗಲಿದೆ ಎಂಬ ಸಂದೇಶವನ್ನು ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಎಸ್.ಎಸ್.ವಿದ್ಯಾಸಂಸ್ಥೆಯ ಕಾರ್ಯದರ್ಶಿ ಸಚಿನ.ಎಚ್.ಪಾಟೀಲ, ಆಡಳಿತಾಧಿಕಾರಿ ಕಿರಣ ಪಾಟೀಲ, ರವಿ.ಬಿ.ಪಾಟೀಲ, ಬಿಪಿಇಡಿ ಕಾಲೇಜಿನ ಉಪನ್ಯಾಸಕರಾದ ಶರಣು ಬಿರಾದಾರ, ಸಾಬಣ್ಣ ಮೇಟಿ, ಸಿದ್ದು ಮಠ, ಪಿಯು ಕಾಲೇಜಿನ ಉಪನ್ಯಾಸಕರಾದ ಎಸ್.ಬಿ.ಮಂಗ್ಯಾಳ, ಪ್ರೌಢಶಾಲೆಯ ಮುಖ್ಯಸ್ಥ ಅಶೋಕ ಕಟ್ಟಿ, ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಜೆ.ಎಮ್. ಕೊಣ್ಣೂರ, ಎಸ

ಬೆಳಕು ಗ್ರಾಮಾಭಿವೃದ್ಧಿ ಸಂಘದ ಸಮಾಮುಖ ಕಾರ್ಯ ಶ್ಲಾಘನೀಯ:ಮಹಾಂತೇಶ ಕೌಜಲಗಿ

ಬೈಲಹೊಂಗಲ– ಸಮಾನ ಮನಸ್ಕರು ಸೇರಿಕೊಂಡು ಬೆಳಕು ಗ್ರಾಮಾಭಿವೃದ್ಧಿ ಸಂಘವನ್ನು ಹುಟ್ಟು ಹಾಕಿ ಅಲ್ಪ ಅವಧಿಯಲ್ಲಿಯೇ ಅತ್ಯುತ್ತಮ ಸಮಾಜಿ–ಕ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದು ಶಾಸಕ ಮಹಾಂತೇಶ ಕೌಜಲಗಿ ಅಭಿಪ್ರಾಯ ವ್ಯಕ್ತಪಡಿಸಿದ್ದರು.

ತಾಲೂಕಿನ ಬೆಳವಡಿ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಬೆಳಕು ಗ್ರಾಮಾಭಿವೃದ್ಧಿ ಸಂಘದಿಂದ ಆಯೋಜಿಸಲಾಗಿದ್ದ ಸ್ವರ್ಗ ರಥ (ಶವ ಸಾಗಿಸುವ ವಾಹನ) ಲೋಕಾರ್ಪಣೆಗೊಳಿಸಿ ವೇದಿಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ವರ್ತಮಾನದಲ್ಲಿ ಮನುಷ್ಯ ಶವಕ್ಕೆ ಹೆಗಲು ಕೊಡಲಾರದಷ್ಟು ತನ್ನ ಕೆಲಸ ಕಾರ್ಯದಲ್ಲಿ ಮುಳುಗಿ ಹೋಗಿದ್ದಾನೆ.ಅಂತಹ ಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಬೆಳಕು ಗ್ರಾಮಾಭಿವೃದ್ಧಿ ಸಂಘದ ಸದಸ್ಯರು ಸುಮಾರು 8.50 ಲಕ್ಷ ರೂ ವೆಚ್ಚದಲ್ಲಿ ಸಜ್ಜುಗೊಳಿಸಿರುವ ವಾಹನವನ್ನು ಉಚಿತವಾಗಿ ಶವ ಸಾಗಿಸಲು ನೀಡಿರುವುದು ಗಮನಾರ್ಹ ಸಂಗತಿ. ಈಗಾಗಲೇ ಬೈಲಹೊಂಗಲ ಪುರಸಭೆಯಲ್ಲಿ ಈ ಯೋಜನೆ ಜಾರಿಯಲ್ಲಿದ್ದು ಕೇವಲ ವಾಹನ ಕೊಡಲಾಗುತ್ತದೆ. ಆದರೆ ಬೆಳಕು ಗ್ರಾಮಾಭಿವೃದ್ಧಿ ಸಂಘ ಸದಸ್ಯರು ಮತ್ತೊಂದು ಹೆಜ್ಜೆ ಮುನ್ನಡೆದು ಶವ ಸಂಸ್ಕಾರಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಡುವ ಯೋಜನೆ ರೂಪಿಸಿಕೊಂಡಿದ್ದಾರೆ. ಮನೆಗಳಲ್ಲಿ ಅನಾಹುತ ವಾದ ಸಂದರ್ಭದಲ್ಲಿ ಮನುಷ್ಯನು ಗೊಂದಲಕ್ಕೆ ಒಳಗಾಗಿ ದಿಕ್ಕು ತೋಚದವನಾಗುತ್ತಾನೆ. ಅಂತಹ ಪರಿಸ್ಥಿತಿಯಲ್ಲಿರುವ ವ್ಯಕ್ತಿಗಳಿಗೆ ಸ್ವರ್ಗರಥದ ಮಹತ್ವ ತಿಳಿಯುತ್ತದೆ.

ನನ್ನ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಇಂತಹ ಸಂಘವನ್ನು ಹಿಂದೆಂದೂ ಕಂಡಿಲ್ಲ. ಇನ್ನುಳಿದ ಸಂಘಗಳಿಗೆ ಬೆಳಕು ಗ್ರಾಮಾಭಿವೃದ್ಧಿ ಸಂಘ ಮಾದರಿಯಾಗಿದೆ. ಜನಪರ ಕೆಲಸ ಕಾರ್ಯಗಳಿಗೆ ಸದಾ ಸಿದ್ಧವಾಗಿರುವ ಬೆಳಕು ಗ್ರಾಮಾಭಿವೃದ್ಧಿ ಸಂಘ ಮುಂಬರುವ ದಿನಗಳಲ್ಲಿ ಬೆಳವಡಿ ಭಾಗದ ಜನತೆಯ ಆಶಾಕಿರಣವಾಗಿ ಹೊರಹೊಮ್ಮಲಿ.

ಹಾಗೂ ಈ ಭಾಗದ ಜನರ ಮತ್ತೊಂದು ಬಹು ದಿನಗಳ ಬೇಡಿಕೆಯಾಗಿದ್ದ ಸ್ಮಶಾನಕ್ಕೆ ಹೋಗಲು ಸುಸಜ್ಜಿತ ರಸ್ತೆಯ ಕಾಮಗಾರಿಗೆ ಈಗಾಗಲೇ ಅಡಿಗಲ್ಲು ಸಮಾರಂಭ ನೆರವೇ–ರಿಸಲಾಗಿದ್ದು,ಸದ್ಯದಲ್ಲಿಯೇ 50 ಲಕ್ಷ ರೂ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣವಾಗಲಿದೆ ಎಂದರು.

ಗ್ರಾ ಪಂ ಅಧ್ಯಕ್ಷ ಚಂದ್ರಶೇಖರಯ್ಯ ಕಾರಮನಿ ಮಾತನಾಡಿ ಮೃತ ವ್ಯಕ್ತಿಗಳನ್ನು ಸಾಗಿಸಲು ಸಾಕಷ್ಟು ತೊಂದರೆಯಾಗುತ್ತಿರುವ ಬಗ್ಗೆ ತಿಳಿದ ಬೆಳಕು ಗ್ರಾಮಾಭಿವೃದ್ಧಿ ಸಂಘ ಸ್ವರ್ಗರಥ ವಾಹನವನ್ನು ಸಮಾಜ–ಕ್ಕೆ ಉಚಿತವಾಗಿ ನೀಡಿದೆ.ಯಾವುದೇ ಜಾತಿಯ ಬೇಧಭಾವವಿಲ್ಲದೇ ವಾಹನದ ಸದುಪಯೋಗ ಪಡಿಸಿಕೊಳ್ಳಬಹುದು ಎಂದರು.

ಸಾನಿಧ್ಯ ವಹಿಸಿದ್ದ ವೇ.ಮೂ. ಬಸಯ್ಯ ವಿರಕ್ತಮಠ, ಮಾಜಿ ಜಿಪಂ ವಿ. ಎಮ್. ಕ–ರಿಕಟ್ಟಿ, ಆರ್. ಎಸ್.ರೊಟ್ಟಯ್ಯನವರಮಠ, ಸೋಮೇಶ್ವರ ಸಕ್ಕರೆ ಕಾರ್ಖಾನೆ ನಿರ್ದೇಶಕ ಆರ್. ಎಮ್. ಮಟ್ಟಿ, ವಿಠ್ಠಲ ಪೀಸೆ ಮಾತನಾಡಿ ಸಂಘ ಸ್ಥಾಪನೆಯಾದ ಕೆಲವೇ ದಿನಗಳಲ್ಲಿ ಸಾಮಾಜಿಕ ಕೆಲಸ ಮಾಡುವ ಮೂಲಕ ಸಾರ್ವಜನಿಕ ವಲಯದಲ್ಲಿ ಗುರುತಿಸಿಕೊಂಡಿದೆ.

ಹಿರಿಯರ ಮಾರ್ಗದರ್ಶನದಲ್ಲಿ ಸಾಗುತ್ತಿರುವ ಬೆಳಕು ಗ್ರಾಮಾಭಿವೃದ್ಧಿ ಸಂಘದ ಸದಸ್ಯರು ಸಮಾಜ–ಕ್ಕೆ ತಮ್ಮದೇಯಾದ ಕೊಡುಗೆ ನೀಡಲು ಕಂಕಬದ್ಧರಾಗಿದ್ದಾರೆ. ಸಮಾನ ಮನಸ್ಕ–ರಿಂದ ಕೂಡಿದ ಸಂಘಕ್ಕೆ ಉತ್ತಮ ಸಲಹೆ ಸೂಚನೆ ನೀಡಿ ಮತ್ತಷ್ಟು ಸಮಾಜಮುಖಿ ಕಾರ್ಯಗಳಿಗೆ ಅಣಿಯಾಗಿಸೋಣ ಎಂದರು.

ಸಂಘದ ಅಧ್ಯಕ್ಷ ಡಾ. ಡಿ. ವಾಯ್. ಗರಗದ, ಬೆಳವಡಿ ರಾಣಿ ಮಲ್ಲಮ್ಮ ಸೌಹಾರ್ದ ಸಹಕಾರಿ ನಿರ್ದೇಶಕ ಬಿ. ಆರ್. ಪಾಟೀಲ, ಗ್ರಾಪಂ ಸದಸ್ಯರಾದ ಬಿ. ಜಿ. ದೇಗಾವಿ, ಬಿ. ಎಚ್. ನರೇಗಲ್ಲ, ರಾಜು ಬಿಸರೊಳ್ಳಿ, ಮುಖಂಡರಾದ ಎ. ಎಮ್. ಬಾಗೇವಾಡಿ, ವಿ.ಎನ್. ಬಡಿಗೇರ,ಎನ್. ಜಿ. ತುರಾಯಿ, ಆರ್. ಆಯ್. ರಾಯೇಜಿ, ಆರ್. ಬಿ. ಉಳ್ಳಿಗೇರಿ ವೇದಿಕೆ ಮೇಲಿದ್ದರು. ಎಮ್. ಪಿ ಉಪ್ಪಿನ ಸ್ವಾಗತಿಸಿದರು. ಪ್ರಕಾಶ ಹುಂಬಿ ನಿರೂಪಿಸಿ, ವಂದಿಸಿದರು.

ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಂಗಮ ಕಾರ್ಯಕ್ರಮ

ಶಿಕ್ಷಕರು ನೀಡಿದ ಜ್ಞಾನಕ್ಕೆ ಬೆಲೆ ಕಟ್ಟಲಾಗದು : ಜೋಷಿನ್

ಸವದತ್ತಿ : ವಿದ್ಯಾರ್ಥಿಗಳನ್ನು ಅಕ್ಷರಜ್ಞಾನ ನೀಡುವ ಮೂಲಕ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸನ್ಮಾರ್ಗದತ್ತಕೊಂಡೊಯ್ಯುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾಗಿದೆ. ಅವರು ನೀಡಿದ ಜ್ಞಾನಕ್ಕೆ ಬೆಲೆ ಕಟ್ಟಲಾಗದುಎಂದುಯಲ್ಲಮ್ಮದೇವಸ್ಥಾನಅಭಿವೃದ್ಧಿ ಪ್ರಾಧಿಕಾರದ ಉಪ ಕಾರ್ಯದರ್ಶಿ ನಾಗರತ್ನಾ ಚೋಳಿನ್ ಹೇಳಿದರು.

ಇಲ್ಲಿನರೇಣುಕಾಯಲ್ಲಮ್ಮದೇವಿ ಪ್ರೌಢಶಾಲೆ ಮೈದಾನದಲ್ಲಿರೇ.ಅ. ಹಳೆಮನಿ ಸರಕಾರಿ ಪ್ರಾಥಮಿಕ ಶಾಲೆ, ಶಾರದಾಕನ್ನಡಕಾನ್ವೆಂಟ್ ಶಾಲೆ, ಹರ್ಲಾಪೂರದ ಸರಕಾರಿ ಶಾಲೆ, ಶಿವಪ್ಪಯ್ಯ ಶಿವಯೋಗಿಗಳ ಸಂಸ್ಕೃತ ವೇದ ಪಾಠಶಾಲೆ ಹಾಗೂ ಎಸ್ಆರ್ಡಿ ಹೈಸ್ಕೂಲಿನ ಹಳೆಯ ವಿದ್ಯಾರ್ಥಿಗಳಿಂದ ರವಿವಾರಜರುಗಿದಗುರುವಂದನಾ ಹಾಗೂ ಸ್ನೇಹ ಸಂಗಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಸರ್ವಾಂಗೀಣಅಭಿವೃದ್ಧಿಗೆ ಪರಿಶ್ರಮಿಸಿದ ಶಿಕ್ಷಕರಿಗೆ ಗೌರವ ಸಮರ್ಪಿಸುವ ಸೌಭಾಗ್ಯ ಪ್ರತಿಯೊಬ್ಬರಿಗೆ ಸಿಗದು. ಹೈಸ್ಕೂಲಿನ 2008–09 ನೇ ಸಾಲಿನಲ್ಲಿಎಸ್ಎಸ್–ಎಲ್ ಸಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳು ಪ್ರಾಥಮಿಕ ಹಂತದಿಂದ ಪ್ರೌಢ ಶಾಲೆವರೆಗೂ ಕಲಿಸಿದ ಸುಮಾರು 50 ಕ್ಕೂ ಅಧಿಕ ಶಿಕ್ಷಕರನ್ನು ಕರೆಸಿ ಗೌರವಿಸಿದ್ದು, ಇತರರಿಗೆ ಮಾದರಿಎಂದರು.

ಮುಖ್ಯ ಶಿಕ್ಷಕಿ ಆರ್.ಪಿ. ಪವಾರ ಮಾತನಾಡಿ, ಶಿಕ್ಷಣ ಕೇಂದ್ರಗಳು ಮಾನವ ವಿಕಾಸಕ್ಕೆ ಬೇಕಾದ ಬೆಳಕು ನೀಡುವಲ್ಲಿಅನನ್ಯ ಸೇವೆ ನೀಡಿವೆ. 17 ವರ್ಷಗಳು ಕಳೆದರೂ ಶಿಕ್ಷಕರ ಮೇಲಿನ ಗೌರವ ಮತ್ತು ಪ್ರೀತಿಕಡಿಮೆಯಾಗಿಲ್ಲ. ಎಲ್ಲರನ್ನು ಒಗ್ಗೂಡಿಸಿ ಸನ್ಮಾನಿಸಿದ್ದು ಅವಿಸ್ಮರಣೀಯಕ್ಷಣ ವೆಂದಅವರುಗುರು ಶಿಷ್ಯರ ಸಂಬಂಧವೆಂಬುದೇ ಹಾಗೆ. ವೇಗವಾಗಿ ಸಾಗುತ್ತಿರುವ ಇಂದಿನ ಈ ಸಮಾಜದಲ್ಲಿ ಸಂಸ್ಕಾರ ಮರೆಯಾಗುತ್ತಿದೆ. ಆದರೆ ಈ 2008–09 ನೇ ಬ್ಯಾಚಿನ ವಿದ್ಯಾರ್ಥಿಗಳು ಮಾದರಿಕಾರ್ಯ ನಡೆಸಿದ್ದಾರೆ ಎಂದರು.

17 ವರ್ಷಗಳ ಬಳಿಕ ಸಮಾಗಮಗೊಂಡ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು ಉಭಯಕುಶಲೋಪರಿ ವಿಚಾ–ರಿಸಿಕೊಂಡು, ಹಳೆಯ ನೆನಪುಗಳ ಕಡಲಲ್ಲಿ ತೇಲಾಡಿದರು. ಸುಮಾರು 50 ಕ್ಕೂ ಅಧಿಕ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಗಲಿದ ಶಿಕ್ಷಕ ಮತ್ತು ಸ್ನೇಹಿತ–ರಿಗೆ ಶ್ರದ್ಧಾಂಜಲಿ, ಮೌನಾಚರಣೆ ಮೂಲಕ ಗೌರವ ಸಮರ್ಪಿಸಲಾಯಿತು. ವೇದಿಕೆಯಲ್ಲಿ ಶಿಕ್ಷಕ ಎಮ್.ಎಫ್. ಯಲಿಗಾರ, ಉಮೇಶ ನರಗುಂದ, ವಿದ್ಯಾರ್ಥಿಗಳಾದ ಗೀತಾ ಸಂದಿಮನಿ ಹಾಗೂ ಮಹಾದೇವಿ ಜೋಚಬಾಳ ತಮ್ಮ ಅನಿಸಿಕೆ ಹಂಚಿಕೊಂಡರು.

ಈ ವೇಳೆ ನಿರ್ವಾಣೇಶ್ವರ ಮಠದ ಮಹಾಂತ ಶ್ರೀ ಸಾನಿಧ್ಯವಹಿಸಿದ್ದರು. ಕೆ.ಎಸ್. ಯಡಿಯೂರಯ್ಯ, ಗಂದಿಗವಾಡದರಾಜಗುರು ಮಠದ ಮೃತ್ಯುಂಜಯ ಶ್ರೀ, ಗಂಗಾದರಗುರೂಜಿ, ಗ್ರಾಪಂಅಧ್ಯಕ್ಷ ಮಂಜುನಾಥ ಕಾಳಪ್ಪನವರ, ಉಪಾಧ್ಯಕ್ಷರೇಣುಕಾ ಸಿದ್ದಕ್ಕನವರ, ಸಿದ್ದನಗೌಡ ಗೂಡ್ಡಾಶಿ, ಓಶಾಂತಿರಾಜೇಶ್ವರಿ, ಶಂಕ್ರಪ್ಪ ನರಗುಂದ, ಶಾಂತಪ್ಪಲಂಗಡಿ ಹಾಗೂ ಹಳೆಯ ವಿದ್ಯಾರ್ಥಿಗಳು ಇದ್ದರು.

ವರ್ಷ ಪೂರ್ತಿ ರೈತರಿಗೆ ನೆರವಾಗುವ ಮಣ್ಣೆತ್ತಿನ

ಎತ್ತುಗಳಿಗೆ ಪೂಜೆ, ರೈತ ಮಳೆಗಾಗಿ ರೈತರು ದೇವರಲ್ಲಿ ಪ್ರಾರ್ಥನೆ

ವರದಿ ಬಸವರಾಜ ಈ ಕುಂಬಾರ

ಮುದ್ದೇಬಿಹಾಳ: ಪಟ್ಟಣದ ಮುಖ್ಯ ಬಜಾರ್ ಮುಂಭಾಗದಲ್ಲಿ ಮಣ್ಣು, ಪಿಒಪಿ ಎತ್ತಿನ ಮೂರ್ತಿಗಳನ್ನು ಮಾರಾಟಕ್ಕೆಮಣ್ಣೆತ್ತಿನ ಇಡಲಾಗಿದೆ.

ಪಟ್ಟಣದ ಸೇರಿದಂತೆ ತಾಲ್ಲೂಕಿನಯಾದ್ಯಂತ ಮಣ್ಣೆತ್ತಿನ ಅಮಾವಾಸ್ಯೆಗೆ ರೈತರು ಸಜ್ಜಾಗಿದ್ದು, ನಗರದ ಮೆಥೋಡಿಸ್ಟ್ ಚರ್ಚ್, ಹಳೆ ಜಿಲ್ಲಾಸ್ಪತ್ರೆ ರಸ್ತೆ ಬಳಿ ಪಿಒಪಿ ಮತ್ತು ಮಣ್ಣಿನಲ್ಲಿ ತಯಾರಿಸಿದ ಎತ್ತುಗಳನ್ನು ಮಾರಾಟಕ್ಕೆ ಇಡಲಾಗಿದೆ.

ಉತ್ತರ ಕರ್ನಾಟಕ ಭಾಗದಲ್ಲಿ ಎತ್ತುಗಳನ್ನು ಬಸವಣ್ಣನ ರೂಪ ಎಂದೇ ಪೂಜಿಸುತ್ತಾರೆ. ಮಳೆ, ಬೆಳೆ ಸಮೃದ್ಧಿಯಾಗಲಿ, ಉತ್ತು ಬಿತ್ತನೆಗೆ ಎತ್ತುಗಳಿಗೆ ಶಕ್ತಿ ನೀಡಲಿ ಎಂದು ಮಣ್ಣೆತ್ತಿನ ಅಮಾವಾಸ್ಯೆಯಂದು ಪೂಜಿಸಲಾಗುತ್ತದೆ. ಆದರೆ, ಕಾಲ ಬದಲಾದಂತೆ ಮಣ್ಣಿನ ಬದಲಾಗಿ (ಪಿಒಪಿ) ಅಲಂಕಾರಿಕ ಮೂರ್ತಿಗಳು ಮಾರುಕಟ್ಟೆಗೆ ಬಂದಿವೆ. ಆಧುನಿಕತೆಯ ಪರಿಣಾಮ ಗ್ರಾಮೀಣ ಭಾಗದ ಹಬ್ಬಗಳು ಸೊರಗಿವೆ.

ತಾಲ್ಲೂಕಿನಲ್ಲಿ ಮುಂಗಾರು ಹಂಗಾಮು ಆಶಾದಾಯಕವಾಗಿಲ್ಲ. ಆದರೂ ರೈತಾಪಿ ವರ್ಗ ಮಣ್ಣೆತ್ತು ಪೂಜಿಸುವ ಮೂಲಕ ಮಳೆ ಬರಲಿ ಎಂದು ಪ್ರಾರ್ಥಿಸಲು ತಯಾರಿ ನಡೆಸಿದ್ದಾರೆ.

ಪಟ್ಟಣದ ಮುಖ್ಯ ಬಜಾರನಲ್ಲಿ ರಸ್ತೆ ಬಳಿ ಮಣ್ಣೆತ್ತಿನ ಅಮಾವಾಸ್ಯೆಗಾಗಿ ಮಣ್ಣಿನ ಎತ್ತುಗಳು, ಪಿಒಪಿ ಎತ್ತುಗಳು ಮಾರಾಟಕ್ಕೆ ಇಡಲಾಗಿದೆ. ವಿವಿಧ ಬಣ್ಣಗಳಿಂದ ಪಿಒಪಿ ಎತ್ತುಗಳನ್ನು ಸಿಂಗರಿಸಲಾಗಿದ್ದು, ಆಕರ್ಷಕವಾಗಿದೆ. ಇದರಿಂದ ಗ್ರಾಹಕರು ಇವುಗಳಿಗೆ ಮೊರೆ ಹೋಗುತ್ತಿದ್ದಾರೆ.

ಮಣ್ಣೆತ್ತಿನ ಅಮಾವಾಸ್ಯೆಗೆ ಮಣ್ಣೆತ್ತುಗಳ ಬದಲಿಗೆ ಪ್ಲಾಸ್ಟರ್ ಆಫ್ ಪ್ಯಾರೀಸ್ (ಪಿಒಪಿ) ಎತ್ತುಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿವೆ. ಮಹಾರಾಷ್ಟ್ರದ ಲಾತೂರ್, ಸೊಲ್ಲಾಪುರ, ಅಕ್ಕಲಕೋಟ ವಿಜಯಪೂರ ದಿಂದ ಪಿಒಪಿ ಎತ್ತುಗಳನ್ನು ಆಮದು ಮಾಡಿಕೊಳ್ಳಲಾಗಿದೆ.

50ರಿಂದ 500ರವರೆಗೆ ಎತ್ತುಗಳ ದರ: ಮಣ್ಣಿನ ಎತ್ತುಗಳಿಗೆ ಬೆಲೆ ಕಡಿಮೆ ಇದ್ದು, ಪಿಒಪಿ ಮೂರ್ತಿಗಳಿಗೆ ದರ ಅಧಿಕವಿದೆ. ಮಣ್ಣಿನ ಜೋಡಿ ಎತ್ತುಗಳ ದರ 50ರಿಂದ ಆರಂಭವಾಗಿ 300 ತನಕ ಬೆಲೆ ಇದ್ದರೆ, ಪಿಒಪಿ ಜೋಡಿ ಎತ್ತುಗಳು 50ರಿಂದ 500

> ಮಣ್ಣಿನ ಎತ್ತುಗಳನ್ನು ಖರೀದಿ ಮಾಡಲು ಬಂದಿದ್ದೇವೆ. ಮಣ್ಣೆತ್ತುಗಳನ್ನು ಪೂಜಿಸುವ ಮೂಲಕ ಮಳೆಯಾಗಲಿ ಎಂದು ರೈತರು ದೇವರಲ್ಲಿ ಬೇಡಿಕೊಳ್ಳುತ್ತೇವೆ ಎಂದರು.
>
> **ಎಸ್ ಎಸ್ ಶಿವಣಗಿ,ಪ್ರಗತಿಪರ ರೈತ ಕಂದಗನೂರ.**

ರ ತನಕ ಬೆಲೆ ಇವೆ.

"ಪೂಜೆ ಮಾಡುವವರು ಮಣ್ಣೆತ್ತುಗಳನ್ನು ಖರೀದಿಸುತ್ತಾರೆ. ಕೆಲವರು ಅಲಂಕಾರಕ್ಕಾಗಿ ಪಿಒಪಿ ಎತ್ತುಗಳನ್ನು ಕೆಲವರು ಅಲಂಕಾರಕ್ಕಾಗಿ ಪಿಒಪಿ ಎತ್ತುಗಳನ್ನು ಖರೀದಿಸುತ್ತಾರೆ. ಚೌಕಾಶಿ ಮಾಡಿ ಖರೀದಿ ಮಾಡುತ್ತಿದ್ದಾರೆ. ಕೆರೆಯಿಂದ ಜೇಡಿ ಮಣ್ಣು ತಂದು ಎತ್ತುಗಳನ್ನು ತಯಾರಿಸುತ್ತೇವೆ. ಕುಂಬಾರ ಕುಟುಂಬಗಳಿದ್ದು, ಕುಂಬಾ–ರಿಕೆಯಲ್ಲಿ ತೊಡಗಿಸಿ ಕೊಂಡಿದ್ದೇವೆ ಎಂದು ವ್ಯಾಪಾರಿ ರಾಮಣ್ಣ ಕುಂಬಾರ ಹೇಳುತ್ತಾರೆ.

ಹಬ್ಬ ಜೋರು: ಆಧುನಿಕತೆಯ ಪರಿಣಾಮ ಭಾಗದ ಹಬ್ಬಗಳು ಸೊರಗಿವೆ. ಮಣ್ಣೆತ್ತಿನ ಖರೀದಿಯೂ ಕಡಿಮೆಯಾಗಿದೆ. ಪಿಒಪಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

ನಗರ ಪ್ರದೇಶಕ್ಕಿಂತ ಗ್ರಾಮೀಣ ಭಾಗದಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಸಂಭ್ರಮದಿಂದ ಮಾಡಲಾಗುತ್ತಿದೆ. ಮಕ್ಕಳು, ಹಿರಿಯರೊಡನೆ ಸೇರಿ ಕೆರೆ, ಕುಂಟೆ ಮಣ್ಣಿನ ಮೂಲಕ ಎತ್ತುಗಳನ್ನು ನಿರ್ಮಿಸಿ ಸ್ಥಳೀಯವಾಗಿ ಸಿಗುವ ವಸ್ತುಗಳಿಂದ ಅಲಂಕಾರ

ಮಾಡುತ್ತಾರೆ. ಹಬ್ಬ ಮುಗಿದ ನಂತರ ಮನೆಯ ಮಾಳಿಗೆಯ ಮೇಲಿಟ್ಟು ಮಳೆ ನೀರಿಗೆ ಕರಗಿ ಹೋಗಲು ಬಿಡುತ್ತಾರೆ.

'ಮನೆಯಲ್ಲಿ ಸಣ್ಣ ಮಣ್ಣೆತ್ತುಗಳನ್ನು ಪೂಜೆ ಮಾಡಲಾಗುತ್ತಿತ್ತು. ಯುವಕರು ದೊಡ್ಡ ಮಣ್ಣೆತ್ತು ಮಾಡಿ ಊರೆಲ್ಲ ಮೆರವಣಿಗೆ ಮಾಡಲಾಗಿತ್ತು. ಆ ನಂತರ ಬಸವಣ್ಣ ದೇವಸ್ಥಾನ ಮೇಲೆ ಅದನ್ನು ಇಡಲಾಗುತ್ತಿದೆ. ಮಳೆಗೆ ಕರಗಿಹೋಗುತ್ತಿತ್ತು' ಎಂದು ಹುಸನಪ್ಪ ಹೋಗಿ,ಸಿದ್ದಲಿಂಗಪ್ಪ ಬಿರಾದಾರ ಹೇಳುತ್ತಾರೆ.

> ಇನ್ನೂ ಒಂದು ದಿನಗಳ ಕಾಲ ಮಣ್ಣೆತ್ತಿನ 25 ರಂದು ಅಮಾವ್ಯಾಸೆ ಇದ್ದು, ಬುಧವಾರ ಹೆಚ್ಚು ಖರೀದಿಯಾಗುವ ಸಾಧ್ಯತೆ ಇದೆ. ಹೆಚ್ಚು ಮಳೆ ಬಂದರೆ ನಮ್ಮ ವ್ಯಾಪಾರಕ್ಕೂ ತೊಂದರೆಯಾಗಬಹುದು.
>
> **ರಾಮಣ್ಣ ಕುಂಬಾರ, ವ್ಯಾಪಾರಿ ಮುದ್ದೇಬಿಹಾಳ**

ಕೆಲವರು ಅಲಂಕಾರಕ್ಕಾಗಿ ಪಿಒಪಿ ಎತ್ತುಗಳನ್ನು ಖರೀದಿಸುತ್ತಾರೆ. ಚೌಕಾಶಿ ಮಾಡಿ ಖರೀದಿ ಮಾಡುತ್ತಿದ್ದಾರೆ. ಕೆರೆಯಿಂದ ಜೇಡಿ ಮಣ್ಣು ತಂದು ಎತ್ತುಗಳನ್ನು ತಯಾರಿಸುತ್ತೇವೆ. ಕುಂಬಾರ ಕುಟುಂಬಗಳಿದ್ದು, ಕುಂಬಾರಿಕೆಯಲ್ಲಿ ತೊಡಗಿಸಿ ಕೊಂಡಿದ್ದೇವೆ ಎಂದು ವ್ಯಾಪಾರಿ ರಾಮಣ್ಣ ಕುಂಬಾರ ಹೇಳುತ್ತಾರೆ.

ಹಬ್ಬ ಜೋರು: ಆಧುನಿಕತೆಯ ಪರಿಣಾಮ ಭಾಗದ ಹಬ್ಬಗಳು ಸೊರಗಿವೆ. ಮಣ್ಣೆತ್ತಿನ ಖರೀದಿಯೂ ಕಡಿಮೆಯಾಗಿದೆ. ಪಿಒಪಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

> ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ಮಣ್ಣೆತ್ತು ಮತ್ತು ಪಿಇಒ ಎತ್ತುಗಳನ್ನು ಮಾರಾಟ ಮಾಡಲಾಗುತ್ತಿದೆ. ಸೋಮವಾರದಿಂದ ಮಾರಾಟಕ್ಕೆ ಇಟ್ಟಿದ್ದು, ವ್ಯಾಪಾರವೂ ಅಲ್ಲ ಸ್ವಲ್ಪವಾಗಿದೆ.
>
> **ಮಹಾಂತೇಶ ಕುಂಬಾರ, ವ್ಯಾಪಾರಿ ಮುದ್ದೇಬಿಹಾಳ**

ನಗರ ಪ್ರದೇಶಕ್ಕಿಂತ ಗ್ರಾಮೀಣ ಭಾಗದಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಸಂಭ್ರಮದಿಂದ ಮಾಡಲಾಗುತ್ತಿದೆ. ಮಕ್ಕಳು, ಹಿರಿಯರೊಡನೆ ಸೇರಿ ಕೆರೆ, ಕುಂಟೆ ಮಣ್ಣಿನ ಮೂಲಕ ಎತ್ತುಗಳನ್ನು ನಿರ್ಮಿಸಿ ಸ್ಥಳೀಯವಾಗಿ ಸಿಗುವ ವಸ್ತುಗಳಿಂದ ಅಲಂಕಾರ ಮಾಡುತ್ತಾರೆ. ಹಬ್ಬ ಮುಗಿದ ನಂತರ ಮನೆಯ ಮಾಳಿಗೆಯ ಮೇಲಿಟ್ಟು ಮಳೆ ನೀರಿಗೆ ಕರಗಿ ಹೋಗಲು ಬಿಡುತ್ತಾರೆ.

೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಯರಗಟ್ಟಿ : ಸಮೀಪದ ಮುನವಳ್ಳಿ ಪಟ್ಟಣದ ಪುರಸಭೆ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ತ್ಯಾಜ್ಯ ಸಂಗ್ರಹಕಾರರು, ಚಿಂದಿ ಆಯುವವರು, ಒಳಚರಂಡಿ ಸೆಪ್ಟಿಕ್ ಟ್ಯಾಂಕ್ ಕೆಲಸಗಾರರು ಹಾಗೂ ಪೌರಸೇವಾ ನೌಕರರಿಗೆ ಯೋಗದ ಮಹತ್ವ ಹಾಗೂ ದಿನನಿತ್ಯ ಮಾಡಬಹುದಾದ ಯೋಗಾಸನಗಳ ಕುರಿತು ಮಾಹಿತಿ ನೀಡಲಾಯಿತು. ಯೋಗ ಗುರು ಅಶೋಕ ಸಂಕಣ್ಣವರ ಮಾರ್ಗದರ್ಶನ ನೀಡಿದರು. ಪುರಸಭೆ ಅಧ್ಯಕ್ಷ ಸಿ.ಬಿ.ಬಾಳಿ, ಉಪಾಧ್ಯಕ್ಷೆ ಕೆ.ಎಚ್.ಹಿರೇಮೇತ್ರಿ, ಮುಖ್ಯಾಧಿಕಾರಿ ಮಹೇಂದ್ರ ತಿಮ್ಮಾಣಿ, ಪುರಸಭೆ ಸದಸ್ಯರು, ಸಿಬ್ಬಂದಿ ವರ್ಗದವರು ಇದ್ದರು.

ಜೈಂಟ್ಸ್ ಗ್ರೂಪ್ : ಪಟ್ಟಣದ ಎಂ.ಎಲ್.ಇ.ಎಸ್. ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶ್ವ ಯೋಗ ದಿನಾಚರಣೆ ಜರುಗಿತು. ಮುಖಂಡರಾದ ಉಮೇಶ ಬಾಳಿ, ಭುಜಂಗರಾವ್ ನಿಕ್ಕಂ, ಬಾಳು ಹೊಸಮನಿ ಇತರರು ಇದ್ದರು.

ರಾಣಿ ಚನ್ನಮ್ಮ ಸಹೇಲಿ : ಶ್ರೀ ಕುಮಾರೇಶ್ವರ ವಿದ್ಯಾಮಂದಿರದ ಪೂರ್ವಪ್ರಾಥಮಿಕ ಶ